ಸಂಪುಟ : 10 ಸಂಚಿಕೆ: 59 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 3 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 59 Pages : 4+2 Price : 3.00 Thursday April 3 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗದಗ-ಬೆಟಗೇರಿ ನಗರಸಭೆಯ ಆಡಳಿತಾಧಿಕಾರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷತೆಯಲ್ಲಿ ಸಭೆ

# ಗದಗ-ಬೆಟಗೇರಿ ನಗರಸಭೆಯ 'ಆಯವ್ಯಯ ವಿಶೇಷ ಸಭೆ'

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ಸಭಾಭವನದಲ್ಲಿ ನಗರಸಭೆಯ ಆಯವ್ಯಯ ವಿಶೇಷ ಸಭೆಯು ಗದಗ-ಬೆಟಗೇರಿ ನಗರಸಭೆಯ ಆಡಳಿತಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ನಗರಸಭೆಯ ಪೌರಾಯುಕ್ತರಾದ ರಾಜಾರಾಮ್ ಪವಾರ್ ಅವರು 2025-2026ನೇ ಸಾಲಿನ ಆಯವ್ಯಯವನ್ನು ಮಂಡಿಸಿದರೆ, ಜಿಲ್ಲಾಧಿಕಾರಿ ಹಾಗೂ ಗದಗ-ಬೆಟಗೇರಿ ನಗರಸಭೆ ಆಡಳಿತಾಧಿಕಾರಿ ಸಿ.ಎನ್. ಶ್ರೀಧರ್ ಅವರು 2025-26 ನೇ ಸಾಲಿನ ಆಯವ್ಯಯಕ್ಕೆ ಅನುಮೋದನೆ ನೀಡಿದರು.

**ಮಿಗತೆಯ ಅಂದಾಜು ಆಯವ್ಯಯ:** 2025-26ನೇ ಸಾಲಿನಲ್ಲಿ ರಾಜಸ್ವ ಖಾತೆಯಲ್ಲಿ ರೂ. 6763.23 ಲಕ್ಷ, ಬಂಡವಾಳ ಖಾತೆಯಲ್ಲಿ ರೂ. 2501.69 ಲಕ್ಷ ಹಾಗೂ ಅಸಾಧಾರಣ ಖಾತೆಯಲ್ಲಿ ರೂ. 2495.58 ಲಕ್ಷಗಳನ್ನು ಒಟ್ಟು ರೂ. 11760.50 ಲಕ್ಷಗಳ ಸ್ವೀಕೃತಿಯನ್ನು ನಿರೀಕ್ಷಿಸಲಾಗಿದೆ.

ರಾಜಸ್ವ ಖಾತೆಯಲ್ಲಿ ರೂ. 7822.31 ಲಕ್ಷಗಳ ರಾಜಸ್ವ ವೆಚ್ಚವನ್ನು, ಬಂಡವಾಳ ಖಾತೆಯಲ್ಲಿ ಆಸ್ತಿ ನಿರ್ಮಾಣಕ್ಕಾಗಿ ರೂ. 4720.97 ಲಕ್ಷಗಳನ್ನು ವೆಚ್ಚಕ್ಕಾಗಿ ಮೀಸಲಿರಿಸಿ,

> ನಗರಸಭೆಯಲ್ಲಿ ಸೇವೆ ಪಡೆಯಲು ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಲು ಪ್ರತಿ ಶಾಖೆಗೆ ಬಯೋಮೆಟ್ರಿಕ್ ಆಧಾರಿತ ಪ್ರವೇಶಾತಿಯನ್ನು ಕಡ್ಡಾಯಗೊಳಿಸಿ ಸಾರ್ವಜನಿಕದ ಸಂಪರ್ಕದ ಸಮಯ ಹೊರತುಪಡಿಸಿ ಇನ್ನುಳಿದ ಸಮಯದಲ್ಲಿ ಇನ್ನಿತರರಿಗೆ ಪ್ರವೇಶಾತಿಯುನ್ನು ನಿಷೇಧಿಸಲು ಸೂಕ್ತ ವ್ಯವಸ್ಥೆ ಮಾಡಿ ಸಾರ್ವಜನಿಕರಿಗಾಗುವ ತೊಂದರೆ ಹಾಗೂ ಮಧ್ಯವರ್ತಿಗಳ ಹಾವಳಿಯನ್ನು ತಡೆಯಲು ಮತ್ತು ಸಾರ್ವಜನಿಕರಿಗೆ ನಿಗದಿತ ಸಮಯದಲ್ಲಿ ಅವರ ಕೆಲಸ ಕಾರ್ಯಗಳನ್ನು ಪೂರೈಸಲು ಸೂಕ್ತ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ.



ಅಸಾಧಾರಣ ಖಾತೆಯಲ್ಲಿ ರೂ. 2995.19 ಲಕ್ಷಗಳ ಅಸಾಧಾರಣ ಆದಾಯವನ್ನು ನಿರೀಕ್ಷಿಸಿ ಒಟ್ಟಾರೆಯಾಗಿ ರೂ. 15538.47 ಲಕ್ಷಗಳ ವೆಚ್ಚವನ್ನು ನಿರೀಕ್ಷಿಸಿ, ರೂ. 3777.97 ಲಕ್ಷಗಳ ಕೊರತೆಯನ್ನು ಅಂದಾಜಿಸಿದೆ. ಈ ಕೊರತೆಯನ್ನು ರೂ. 4224.94 ಲಕ್ಷಗಳ ಆರಂಭಿಕ ಶಿಲ್ಕುದಿಂದ ಸರಿದೂಗಿಸಿ ಒಟ್ಟಾರೆಯಾಗಿ ರೂ. 446.97 ಲಕ್ಷಗಳ ಉಳಿತಾಯ/ಮಿಗತೆಯ ಅಂದಾಜನ್ನು ಮಂಡಿಸಿದೆ.

**ಸ್ವೀಕೃತಿ/ಆದಾಯ:** ಆಯ-ವ್ಯಯದಲ್ಲಿ ನಗರಸಭೆಗೆ ಆಸ್ತಿ ತೆರಿಗೆಯಿಂದ ಶೇ 21ರಷ್ಟು, ವಹಿಸಿದ ಸ್ವೀಕೃತಿಯಿಂದ ಶೇ 1ರಷ್ಟು, ಮಳಿಗೆಗಳ ಬಾಡಿಗೆಯಿಂದ ಶೇ 1ರಷ್ಟು, ಫೀ ಹಾಗೂ ಬಳಕೆ ವೆಚ್ಚದಿಂದ ಶೇ 15ರಷ್ಟು ಹಾಗೂ ರಾಜ್ಯ/ಕೇಂದ್ರ ಸರ್ಕಾರದ ಅನುದಾನ/ವಂತಿಕೆಗಳಿಂದ ಶೇ 62ರಷ್ಟು ಆದಾಯ ಬರಬಹುದೆಂದು ಅಂದಾಜಿಸಲಾಗಿದೆ. ಅಭಿವೃದ್ಧಿ ಶುಲ್ಕದಿಂದ ರೂ. 100 ಲಕ್ಷ, ಕಟ್ಟಡ ಅನುಮತಿ ಶುಲ್ಕದಿಂದ ರೂ. 60 ಲಕ್ಷ, ವಾಣಿಜ್ಯ ಸಂಕೀರ್ಣಗಳ ಬಾಡಿಗೆಯಿಂದ ರೂ. 65 ಲಕ್ಷ, ಅಂಗಡಿಗಳ ಲೈಸನ್ಸ್‌ನಿಂದ ರೂ. 65 ಲಕ್ಷ, ಖಾತಾ ನಕಲು ಶುಲ್ಕದಿಂದ ರೂ. 16 ಲಕ್ಷ, ಖಾತಾ ಬದಲಾವಣೆಯಿಂದ ರೂ. 110 ಲಕ್ಷ, ಘನತಾಜ್ಯ ನಿರ್ವಹಣೆ ಶುಲ್ಕದಿಂದ ರೂ. 65 ಲಕ್ಷ, ಒಳಚರಂಡಿ ಬಳಕೆದಾರರ ಫೀ ರೂ. 10 ಲಕ್ಷ ಹಾಗೂ ನೀರು ಸರಬರಾಜು ಫೀಯಿಂದ ರೂ. 250 ಲಕ್ಷಗಳ ಆದಾಯವನ್ನು ಅಂದಾಜಿಸಿದೆ. ಪ್ರಸ್ತುತ ಸುಮಾರು ರೂ. 1300 ಲಕ್ಷಗಳಿರುವ ಆಸ್ತಿ ತೆರಿಗೆಯನ್ನು ರೂ. 1400 ಲಕ್ಷಗಳಿಗೆ ಹೆಚ್ಚಿಸಿ ಕಂದಾಯ ವಸೂಲಾತಿಯ ಸಾಮರ್ಥ್ಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.

> ನಗರಸಭೆಯ ಆಧೀನದ ಮುನ್ಸಿಪಲ್ ಹೈ-ಸ್ಕೂಲ್ ನಿರ್ವಹಣೆ ಹಾಗೂ ದುರಸ್ಥಿಗಾಗಿ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಎಸ್.ಸಿ/ಎಸ್‌ಟಿ ಜನಾಂಗದ, ಆರ್ಥಿಕವಾಗಿ ಹಿಂದುಳಿದವರ ಹಾಗೂ ವಿಕಲ ಚೇತನವುಳ್ಳವರ ಆರ್ಥಿಕ ಸ್ವಾವಲಂಬನೆ ಹಾಗೂ ಅಭಿವೃದ್ಧಿಗಾಗಿ, ನಗರದ ನೈರ್ಮಲ್ಯವನ್ನು ಹೆಚ್ಚಿಸಲು ಸಾರ್ವಜನಿಕ ಹಾಗೂ ವೈಯಕ್ತಿಕ ಶೌಚಾಲಯ ಕಾಮಗಾರಿಗಳನ್ನು ಕೈಗೊಳ್ಳಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

**ನಗರಸಭೆಯ ಆಡಳಿತ:** 2025-26ನೇ ಸಾಲಿನಲ್ಲಿ ಪೌರಕಾರ್ಮಿಕರ ಬೆಳಗಿನ ಉಪಹಾರದ ವ್ಯವಸ್ಥೆ ರೂ. 61 ಲಕ್ಷಗಳನ್ನು ಅವರ ಅಭ್ಯುದಯ ವೆಚ್ಚಕ್ಕಾಗಿ ಮೀಸಲಿರಿಸಲಾಗಿದೆ. ಪ್ರಿಂಟಿಂಗ್ ಮತ್ತು ಸ್ಟೇಶನರಿಗಾಗಿ ರೂ. 22.25 ಲಕ್ಷಗಳನ್ನು, ಆಡಳಿತ ಮಂಡಳಿಯ ಗೌರವಧನ ಇತ್ಯಾದಿಗಳಿಗಾಗಿ ರೂ. 49.07 ಲಕ್ಷ, ವಾಹನಗಳ ದುರಸ್ಥಿಗಾಗಿ ರೂ. 65 ಲಕ್ಷ ಹಾಗೂ ವಾಹನಗಳ ವಿಮೆಗಾಗಿ ರೂ. 20 ಲಕ್ಷ, ಸಮಾಲೋಚನ ವೆಚ್ಚಕ್ಕಾಗಿ ರೂ. 17.50 ಲಕ್ಷ, ಜಾಹೀರಾತು ಹಾಗೂ ಪ್ರಚಾರಕ್ಕಾಗಿ ರೂ. 26.60 ಲಕ್ಷ, ಸಂಪರ್ಕ ವೆಚ್ಚಕ್ಕಾಗಿ ರೂ 3.50 ಲಕ್ಷ ಹೀಗೆ ಸಾಮಾನ್ಯ ಆಡಳಿತಕ್ಕಾಗಿ ರೂ. 1557.95 ಲಕ್ಷಗಳನ್ನು ಮೀಸಲಿಸಿ ಕಾಯ್ದಿರಿಸಿದೆ.

> **ಕುಡಿಯುವ ನೀರು ಹಾಗೂ ಒಳಚರಂಡಿ**
>
> ಶುದ್ಧ ಕುಡಿಯುವ ನೀರು ಒದಗಿಸುವ ಕಾರ್ಯಕ್ಕಾಗಿ ಈ ವರ್ಷ ವಿದ್ಯುತ್ ಬಿಲ್ ಹೊರತುಪಡಿಸಿ ರೂ. 280 ಲಕ್ಷಗಳನ್ನು ವೆಚ್ಚಕ್ಕಾಗಿ ಅವಕಾಶ ಮಾಡಿಕೊಳ್ಳಲಾಗಿದೆ. ಸ್ಥಾವರ ಯಂತ್ರೋಪಕರಣಗಳಂತಹ ಬಂಡವಾಳ ವೆಚ್ಚಕ್ಕಾಗಿ ರೂ. 676.18 ಲಕ್ಷಗಳನ್ನು ವೆಚ್ಚ ಮಾಡಲು ಉದ್ದೇಶಿಸಲಾಗಿದೆ. ಇದರೊಂದಿಗೆ ರೂ. 1414 ಲಕ್ಷಗಳ ವಿದ್ಯುತ್ ಬಿಲ್, ಒಳಚರಂಡಿ ಯೋಜನೆಯ ನಿರ್ವಹಣೆಗಾಗಿ ರೂ. 100 ಲಕ್ಷಗಳನ್ನು ಹಾಗೂ ನಿರ್ಮಾಣಕ್ಕಾಗಿ ರೂ. 265.18 ಲಕ್ಷಗಳನ್ನು ಪ್ರಸಕ್ತ ಆಯವ್ಯಯದಲ್ಲಿ ಮೀಸಲಿಡಲಾಗಿದೆ.

**ರಸ್ತೆ ಹಾಗೂ ಚರಂಡಿ:** ರಸ್ತೆ ರಿಪೇರಿಗಾಗಿ ರೂ. 80.00 ಲಕ್ಷಗಳನ್ನು ಹಾಗೂ ಹೊಸ ರಸ್ತೆಗಳ ನಿರ್ಮಾಣಕ್ಕಾಗಿ ರೂ. 1001.96 ಲಕ್ಷಗಳನ್ನು ಹಾಗೂ ತ್ಯಾಜ್ಯ ನೀರು ಹರಿಯಲು ಚರಂಡಿ ನಿರ್ವಹಣೆಗೆ ರೂ. 109.50 ಲಕ್ಷಗಳನ್ನು ಹಾಗೂ ಹೊಸ ಚರಂಡಿ ನಿರ್ಮಾಣ ಮಾಡುವ ಕಾರ್ಯಕ್ರಮಕ್ಕಾಗಿ ರೂ. 265.18 ಲಕ್ಷಗಳ ಗುರಿ ಹೊಂದಲಾಗಿದೆ.

**ಬೀದಿ ದೀಪ:** ನಗರದ ಬೀದಿದೀಪದ ನಿರ್ವಹಣೆಯನ್ನು ಮೂರು ವಿಭಾಗಗಳಾಗಿ ವಿಂಗಡಿಸಿ ಹೊರಗುತ್ತಿಗೆ ನೀಡಲು ಈ ವರ್ಷ ರೂ. 1.35 ಕೋಟಿಗಳನ್ನು ಮೀಸಲಿರಿಸಿದ್ದು ಹಾಗೂ ಹೊಸ ಬಡಾವಣೆಗಳಿಗೆ ಬೀದಿದೀಪದ ವ್ಯವಸ್ಥೆಯನ್ನು ವಿಸ್ತರಿಸುವ ಹಾಗೂ ವಿವಿಧ ಸ್ಥಳಗಳಲ್ಲಿ High-mast flood-light ಹಾಕುವ ಕಾರ್ಯಕ್ರಮವನ್ನು ಮುಂದುವರೆಸಲಾಗಿದ್ದು, ಅದಕ್ಕಾಗಿ ಈ ವರ್ಷ ರೂ. 1.14 ಕೋಟಿಗಳನ್ನು ಮೀಸಲಿರಿಸಿ ನಗರದ ಎಲ್ಲ ಬಡಾವಣೆ, ಓಣಿ, ಹಾಗೂ ವಿವಿಧ ಸ್ಥಳಗಳಲ್ಲಿ ವಿದ್ಯುತ್-ದೀಪಗಳನ್ನು ಬೆಳಗಿಸುವ ಕಾರ್ಯಕ್ರಮ ಮುಂದುವರಿಸಿದೆ.

▸▸ 3ನೇ ಪುಟಕ್ಕೆ

## 340ನೇ ಶಿವಾನುಭವ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಲಿಂ.ಶ್ರೀಮ.ನಿ.ಪ್ರ.ಸ್ವ ಶಿವಶಾಂತವೀರ ಶಿವಯೋಗಿಗಳು ಸಂಸ್ಥಾನ ಗವಿಮಠ,ಕೊಪ್ಪಳ

ಇವರ ಕೃಪಾಶೀರ್ವಾದದಿಂದ ಎಪ್ರಿಲ್ 3ರ ರಾತ್ರಿ 8 ಗಂಟೆಗೆ ಸೂಡಿಯ ಶ್ರೀಜುಕ್ತಿ ಹಿರೇಮಠದಲ್ಲಿ 340ನೇ ಶಿವಾನುಭವ ಜರುಗುವುದು.

ಜುಕ್ತಿಹಿರೇಮಠದ ಶ್ರೀ ಷ.ಬ್ರ. ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು ಸಾನ್ನಿಧ್ಯ ವಹಿಸುವರು. ಶ್ರೀ ವೀರೇಶ್ವರ ಪುಣ್ಯಾಶ್ರಮದ ಜಿ. ಮುತ್ತುರಾಜ ಶಾಸ್ತ್ರಿಗಳು ಪ್ರವಚನ ನೆರವೇರಿಸುವರು. ಭಕ್ತಿಸೇವೆಯನ್ನು ದಿ. ಶಂಕರಪ್ಪ ಸಂಗಳದ ಕುಟುಂಬದವರು, ದಿ. ಗುರುಸಿದ್ದಯ್ಯ ಫಕೀರಯ್ಯ ಹರ್ತಿಮಠ ಸ್ಮರಣಾರ್ಥ ಚಂದ್ರಶೇಖರ ಗು.ಹರ್ತಿಮಠ ಅಣ್ಣಿಗೇರಿ, ದಿ. ಶರಣಪ್ಪ ಚನ್ನಬಸಪ್ಪ ಮಾರನಬಸರಿ ಸ್ಮರಣಾರ್ಥ ಅವರ ಮಕ್ಕಳಿಂದ, ತಂದೆ-ತಾಯಿಗಳ ಸ್ಮರಣಾರ್ಥ ವೀರಣ್ಣ ವೀರಪಾಕ್ಷಪ್ಪ ಅಡಗತ್ತಿ ಕುಟುಂಬದವರು, ಸಂಗಮ್ಮ ಕಳಕಪ್ಪ ಪಟ್ಟನಶೆಟ್ರ ಸ್ಮರಣಾರ್ಥ ಅಂದಪ್ಪ ಸಂಗಪ್ಪ ಸೂಡಿ ವಹಿಸುವರು.

ಈ ಕಾರ್ಯಕ್ರಮದ ಸದುಪಯೋಗವನ್ನು ಸರ್ವರೂ ಪಡೆದುಕೊಂಡು ಗುರು ಕೃಪೆಗೆ ಪಾತ್ರರಾಗಬೇಕೆಂದು ಕಾರ್ಯದರ್ಶಿ ಶರಣಬಸಯ್ಯ ಕೋರಿದ್ದಾರೆ.

### ದಶಕಗಳ ನಂತರ ಶೇ.100 ತೆರಿಗೆ ಸಂಗ್ರಹಣೆ । ಜಿ.ಪಂ ಸಿಇಓ ಭರತ್ ಎಸ್ ಮಾಹಿತಿ


# ತೆರಿಗೆ ವಸೂಲಿಯಲ್ಲಿ ಜಿಲ್ಲೆಯ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 122 ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿಯ ವಿಶೇಷ ಅಭಿಯಾನದ ಫಲವಾಗಿ 90 ಗ್ರಾ.ಪಂಗಳು ಶೇ. 100ರಷ್ಟು ಸಾಧನೆ ಮಾಡಿದ್ದು, ಪ್ರಸಕ್ತ ಶೇ. 100.61 ಸಾಧನೆ ಮಾಡಿ ರಾಜ್ಯದಲ್ಲಿ 7ನೇ ಸ್ಥಾನದಲ್ಲಿದೆ ಎಂದು ಜಿಲ್ಲಾ ಪಂಚಾಯಿತಿ ಸಿ.ಇ.ಓ ಭರತ್ ಎಸ್ ಹೇಳಿದರು.

ಈ ಕುರಿತು ಮಾಹಿತಿ ನೀಡಿ ಮಾತನಾಡಿದ ಅವರು, ಜಿಲ್ಲೆಗೆ ಸವಾಲಾಗಿದ್ದ ಗ್ರಾ.ಪಂ ತೆರಿಗೆ ಬಾಕಿ ವಸೂಲಾತಿ ಪ್ರಮಾಣ ದಿನೇ ದಿನೇ ಹೆಚ್ಚಾಗುತ್ತಿದ್ದು, ಜಿಲ್ಲೆಯ 7 ತಾಲೂಕುಗಳಲ್ಲಿ ತೆರಿಗೆ ವಸೂಲಿಯಲ್ಲಿ ಶೇ. 100.61ರಷ್ಟು ಸಾಧನೆ ಮಾಡಿರುವುದು ಹೆಮ್ಮೆಯ ಸಂಗತಿಯಾಗಿದೆ. ಪ್ರಸಕ್ತ ಸಾಲಿನ ಗುರಿ 1387.54 ಲಕ್ಷ ಇದ್ದು, 1395.95 ಲಕ್ಷ ರೂ ತೆರಿಗೆ ಸಂಗ್ರಹವಾಗಿದೆ ಎಂದು ಹೇಳಿದರು.

ಹಲವಾರು ವರ್ಷಗಳಿಂದ ಗ್ರಾ.ಪಂ ತೆರಿಗೆ ವಸೂಲಾತಿ ಮಂದಗತಿಯಲ್ಲಿ ಸಾಗಿತ್ತು. ಇದನ್ನರಿತು ಜಿಲ್ಲೆಯಲ್ಲಿ ಹಮ್ಮಿಕೊಂಡ ವಿಶೇಷ ಅಭಿಯಾನದ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ. ವಿವಿಧ ಹಂತಗಳಲ್ಲಿ ನಡೆದ ವಿಶೇಷ ಅಭಿಯಾನದಲ್ಲಿ ತಾಲೂಕು ಪಂಚಾಯಿತಿ/ಗ್ರಾಮ ಪಂಚಾಯಿತಿ ಅಧಿಕಾರಿಗಳು/ಸಿಬ್ಬಂದಿ ಹಾಗೂ ಜನಪ್ರತಿನಿಧಿಗಳು ಜನರ ಮನವೊಲಿಸಿ ತೆರಿಗೆ ವಸೂಲಿ ಮಾಡಿದ್ದಾರೆ. ಇದರಿಂದಾಗಿ ಗ್ರಾಮ ಪಂಚಾಯಿತಿಗಳ ಆರ್ಥಿಕ ಬಲ ಹೆಚ್ಚಾದಂತಾಗಿದೆ ಎಂದರು.




> ಶೇ.100ರಷ್ಟು ಸಾಧನೆ ಮಾಡಿದ ತಾಲೂಕು ಪಂಚಾಯತಿಗಳು: ಮುಂಡರಗಿ ಶೇ. 105.28, ನರಗುಂದ ಶೇ. 100.86, ರೋಣ ಶೇ. 104.86, ಶಿರಹಟ್ಟಿ ಶೇ. 102.47, ಗಜೇಂದ್ರಗಡ ಶೇ. 100.60, ಲಕ್ಷ್ಮೇಶ್ವರ ಶೇ. 105.28 ಹಾಗೂ ಗದಗ ತಾಲೂಕು ಶೇ. 94.81ರಷ್ಟು ಪ್ರಗತಿ ಸಾಧಿಸಿದೆ. ಒಟ್ಟಾರೆ ಜಿಲ್ಲೆಯಲ್ಲಿನ 90 ಗ್ರಾಮ ಪಂಚಾಯಿತಿಗಳು ಪ್ರಸ್ತುತ ವರ್ಷದ ಬೇಡಿಕೆಗೂ ಮೀರಿ ಸಾಧನೆ ಮಾಡಿವೆ.

ಜಿಲ್ಲಾ ಪಂಚಾಯಿತಿಯಿಂದ ತೆರಿಗೆ ವಸೂಲಿಗಾಗಿ 'ತೆರಿಗೆ ಮಾಸಾಚರಣೆ' ಹಮ್ಮಿಕೊಂಡು ಗ್ರಾ.ಪಂ ವ್ಯಾಪ್ತಿಯ ಎಲ್ಲ ಗ್ರಾಮಗಳಲ್ಲಿ ಮನೆ ಮನೆ ಭೇಟಿ ಮತ್ತು ಜಾಥಾ ಕಾರ್ಯಕ್ರಮ ಮೂಲಕ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಲಾಗಿತ್ತು. ಅದರಂತೆ ಮನೆ ಮನೆಗೆ ತೆರಳಿ ಕರ ವಸೂಲಿ ಮಾಡಿದ್ದರಿಂದ ಈ ಸಾಧನೆ ಸಾಧ್ಯವಾಗಿದೆ. ನಮ್ಮ ನಿರಿಕ್ಷೆ ಈಗ ಸಾಕಾರವಾಗಿದೆ. ಇದಕ್ಕೆ ಕಾರಣರಾದ ಸಾರ್ವಜನಿಕರಿಗೂ ಅವರು ಧನ್ಯವಾದಗಳನ್ನು ತಿಳಿಸಿದ್ದಾರೆ.

## ಉತ್ತರ ಕರ್ನಾಟಕದ ಶಾಸಕರಿಂದ ಸಿದ್ದರಾಮಯ್ಯಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ ಮಾಡಿದ ಸಿಎಂ ಸಿದ್ದರಾಮಯ್ಯ ಅವರಿಗೆ ಉತ್ತರ ಕರ್ನಾಟಕದ ಶಾಸಕರು ಭೇಟಿ ಮಾಡಿ ಸನ್ಮಾನಿಸಿದರು.



ಮಾ. 16ರಂದು ಮಾಜಿ ಸಚಿವ ಕೆ.ಎಚ್. ಪಾಟೀಲರ ಜನ್ಮಶತಮಾನೋತ್ಸವ ಮತ್ತು ಗದಗ ಕೋ. ಆಪರೇಟಿವ್ "ಕಾಟನ್ ಸೇಲ್ಸ್ ಸೊಸೈಟಿಯ ನೂತನ ಕಟ್ಟಡ"ದ ಉದ್ಘಾಟನಾ ಸಮಾರಂಭದಲ್ಲಿ ವೈದ್ಯಕೀಯ ಕಾರಣಗಳಿಂದಾಗಿ ಭಾಗವಹಿಸಲು ಸಾಧ್ಯವಾಗದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂದೇ ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ ಮಾಡುವುದಾಗಿ ಬದ್ಧ ಎಂದು ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಕಳೆದ ಗುರುವಾರ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟದಲ್ಲಿ ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ ಅವರ ಹೆಸರನ್ನು ನಾಮಕರಣ ಮಾಡುವುದಾಗಿ ನಿರ್ಣಯ ಕೈಗೊಂಡಿದ್ದರಿಂದ ಸಚಿವರಾದ ಶರಣಪ್ರಕಾಶ ಪಾಟೀಲ, ಎಚ್.ಕೆ. ಪಾಟೀಲ ಒಳಗೊಂಡಂತೆ ಉತ್ತರ ಕರ್ನಾಟಕದ ವಿವಿಧ ವಿಧಾನಸಸಭಾ ಕ್ಷೇತ್ರಗಳ ಶಾಸಕರಾದ ಜಿ.ಎಸ್. ಪಾಟೀಲ, ಪ್ರಸಾದ್ ಅಬ್ಬಯ್ಯ, ಬಸವರಾಜ ಶಿವಣ್ಣನವರ, ಯು.ಬಿ. ಬಣಕಾರ, ಜಿ.ಟಿ. ಪಾಟೀಲ, ಪ್ರಕಾಶ ಕೋಳಿವಾಡ, ಎನ್.ಎಚ್. ಕೋನರಡ್ಡಿ, ಮಾಜಿ ಶಾಸಕ ಡಿ.ಆರ್. ಪಾಟೀಲ ಸೇರಿದಂತೆ ಅನೇಕ ಮುಖಂಡರು, ಕಾರ್ಯಕರ್ತರು ಸಿಎಂ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಿದರು.

### ಶ್ರೀ ದೇವರ ದಾಸಿಮಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಡಿಸಿ ಸಿ.ಎನ್. ಶ್ರೀಧರ್

## ದಾಸಿಮಯ್ಯನವರ ಸಂದೇಶಗಳನ್ನು ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಆದ್ಯ ವಚನಕಾರ, ನೇಕಾರ ಸಂತ ದೇವರ ದಾಸಿಮಯ್ಯನವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದಿ ಲೋಕಕಲ್ಯಾಣಕ್ಕಾಗಿ ಶ್ರಮಿಸಿದವರು. ಮನುಷ್ಯನ ಅಗತ್ಯತೆಗಳನ್ನು ಪೂರೈಸುವವರು ರೈತರು ಮತ್ತು ನೇಕಾರರಾಗಿದ್ದಾರೆ. ದೇವರ ದಾಸಿಮಯ್ಯನವರು ತಮ್ಮ ನೇಕಾರಿಕೆ ವೃತ್ತಿಯೊಂದಿಗೆ ವಚನಗಳನ್ನು ಸಮಾಜಕ್ಕೆ ಕೊಡುಗೆ-ಯಾಗಿ ಕೊಟ್ಟಿದ್ದಾರೆ. ದೇವರ ದಾಸಿಮಯ್ಯನವರ ವಚನಗಳ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಪ್ರಾಯಪಟ್ಟರು.



ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಹಯೋಗದಲ್ಲಿ ಗದಗ-ಬೆಟಗೇರಿಯ ಟರ್ನಲ್ ಪೇಟೆ ಶ್ರೀ ದೇವರ ದಾಸಿಮಯ್ಯ ವೇದಿಕೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಆದ್ಯ ವಚನಕಾರ, ನೇಕಾರ ಸಂತ ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ-ಬೆಟಗೇರಿ ಗುರುಸೇವಕರಾದ ರಾಘವೇಂದ್ರ ಕೊಪ್ಪಳ ಮಾತನಾಡಿ, ದೇವರ ದಾಸಿಮಯ್ಯ ಯಾದಗಿರಿ ಜಿಲ್ಲೆ ಸುರಪುರ ತಾಲೂಕಿನ ಮುದನೂರು ಎಂಬ ಗ್ರಾಮದಲ್ಲಿ ಜನಿಸಿದರು. ಮುದನೂರು ಹಲವಾರು ದೇವಾಲಯಗಳಿಂದ ಕೂಡಿದ್ದು, ಅಲ್ಲಿನ ರಾಮನಾಥ ದೇವಸ್ಥಾನ ದೇವಲ ಮಹರ್ಷಿಯ ಅಚ್ಚುಮೆಚ್ಚಿನ ಸ್ಥಳವಾಗಿತ್ತು. ದೇವರ ದಾಸಿಮಯ್ಯನವರು ರಾಮನಾಥ ಸ್ವಾಮಿಯ ಆರಾಧಕರಾಗಿದ್ದು, ಇವರ ಅಂಕಿತನಾಮ ರಾಮನಾಥ ಎಂದು ಆಗಿತ್ತು ಎಂದು ತಿಳಿಸಿ ದೇವರ ದಾಸಿಮಯ್ಯನವರ ಜೀವನ ಮತ್ತು ಸಂದೇಶಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದ ಮುಖ್ಯಸ್ಥರು, ಗಣ್ಯರು, ಹಿರಿಯರು ಹಾಜರಿದ್ದರು.

ವೆಂಕಟೇಶ ಅಲ್ಕೋಡ ನಾಡಗೀತೆ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸ್ವಾಗತಿಸಿದರು.

## ಸಂಪಾದಕೀಯ

# ವಿವಾದದ ಮಧ್ಯೆಯೂ ವಕ್ಫ್ ತಿದ್ದುಪಡಿ ಮಸೂದೆ ಮಂಡನೆ

ದೇಶಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದ್ದ ವಕ್ಫ್ ತಿದ್ದುಪಡಿ ಕಾಯ್ದೆ 2024 ಕೊನೆಗೂ ಲೋಕಸಭೆಯಲ್ಲಿ ಮಂಡನೆಯಾಗಿದೆ. ವಿರೋಧ ಪಕ್ಷಗಳ ಭಾರೀ ವಿರೋಧದ ಮಧ್ಯೆಯೂ ಕೇಂದ್ರ ಸಂಸದೀಯ ಹಾಗೂ ಅಲ್ಪಸಂಖ್ಯಾತರ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವಿಧೇಯಕವನ್ನು ಮಂಡಿಸಿದರು.

ಈಗಾಗಲೇ ವಕ್ಫ್ ತಿದ್ದುಪಡಿ ಮಸೂದೆಗೆ ಕಾಂಗ್ರೆಸ್ ಸಹಿತ ಇಂಡಿಯಾ ಮೈತ್ರಿಕೂಟದ ಪಕ್ಷಗಳು ವಿರೋಧ ವ್ಯಕ್ತಪಡಿಸಿವೆ. ದೇಶದ ಅನೇಕ ಮುಸ್ಲಿಂ ಸಂಘಟನೆಗಳು ತಮ್ಮ ವಿರೋಧವನ್ನು ದಾಖಲಿಸಿವೆ. ರಂಜಾನ್ ಹಬ್ಬದ ಸಂದರ್ಭದಲ್ಲೂ ಕೈಗೆ ಕಪ್ಪು ಬಟ್ಟೆ ಕಟ್ಟಿಕೊಂಡು ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗಿಯಾಗಿ ಕೇಂದ್ರ ಸರಕಾರದ ಧೋರಣೆಯನ್ನು ಖಂಡಿಸಿದ್ದಾರೆ. ಈ ವಿರೋಧದ ಮಧ್ಯೆಯೂ ಕೇಂದ್ರ ಸರಕಾರ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಈ ವಿಧೇಯಕ ಅಂಗೀಕಾರಕ್ಕಾಗಿ ಬೇಕಾದ ಸಂಖ್ಯಾಬಲದ ಲೆಕ್ಕಾಚಾರವನ್ನೂ ಆರಂಭಿಸಿದೆ. ಜೊತೆಗೆ ಈ ಬಗ್ಗೆ ಚರ್ಚೆ ನಡೆಸಲು ಒಟ್ಟು 8 ಗಂಟೆಗಳ ಸಮಯವನ್ನು ಮೀಸಲಿಡಲಾಗಿದೆ. ಅವಶ್ಯಕತೆ ಬಿದ್ದರೆ ಸಮಯವನ್ನು ಹೆಚ್ಚಿಸುವ ಸಾಧ್ಯತೆಗಳೂ ಇವೆ. ಸದ್ಯ ಕೇಂದ್ರ ಸರಕಾರದ ಈ ನಿರ್ಧಾರವನ್ನು ಪ್ರಶ್ನಿಸಿ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ ಕೋರ್ಟ್ ಮೊರೆ ಹೋಗಲು ನಿರ್ಧರಿಸಿದೆ. ಆದರೆ ಕೆಲ ಮುಸ್ಲಿಂ ಸಂಘಟನೆಗಳು, ಮುಸ್ಲಿಂ ಸಮುದಾಯದ ಮಹಿಳೆಯರು ವಿಧೇಯಕವನ್ನು ಸ್ವಾಗತಿಸಿದ್ದಾರೆ. ಕೆಲವು ಕಡೆ ಸಂಭ್ರಮವನ್ನು ಆಚರಿಸಿದ್ದಾರೆ. ಹೀಗಾಗಿ ವಕ್ಫ್ ತಿದ್ದುಪಡಿ ಮಸೂದೆಯಲ್ಲಿ ಏನಿದೆ ಎನ್ನುವುದು ಇನ್ನೂ ಅಸ್ಪಷ್ಟವಾಗಿರುವುದು ಇಲ್ಲಿ ಸ್ಪಷ್ಟವಾಗಿದೆ.

ವಕ್ಫ್ ಆಸ್ತಿಗಳ ನಿರ್ವಹಣೆಯನ್ನು ಪಾರದರ್ಶಕವಾಗಿ, ವ್ಯವಸ್ಥಿತವಾಗಿ ನಿರ್ವಹಿಸಲು ಕಾಯಿದೆ ಜಾರಿಗೆ ತರಲಾಗುತ್ತಿದೆ ಎಂದು ಕೇಂದ್ರ ಸಚಿವರು ಹೇಳುತ್ತಿದ್ದರೆ, ಮುಸ್ಲಿಂರ ವೈಯಕ್ತಿಕ ಹಕ್ಕನ್ನು ಕಸಿದುಕೊಳ್ಳಲಾಗುತ್ತಿದೆ ಎಂದು ಕೆಲವರು ಆರೋಪಿಸುತ್ತಾರೆ.

ಹೀಗಾಗಿ ಮುಂದಿನ ದಿನಗಳಲ್ಲಿ ವಿಧೇಯಕದ ಬಗ್ಗೆ ನಡೆಯುವ ಚರ್ಚೆಯಲ್ಲಿ ಬಿಜೆಪಿ ನಡೆಗೆ ವಿರೋಧ ವ್ಯಕ್ತಪಡಿಸುವ ಜೊತೆಗೆ, ವಿಧೇಯಕದಲ್ಲಿನ ಯಾವ ಅಂಶಗಳು ಮುಸ್ಲಿಂ ಸಮುದಾಯಕ್ಕೆ ಮಾರಕವಾಗಿದೆ ಎನ್ನುವ ಬಗ್ಗೆ ಪ್ರತಿಪಕ್ಷಗಳು ಗಂಭೀರ ಚರ್ಚೆ ನಡೆಸಲಿ. ಲೋಕಸಭೆ ಚರ್ಚೆಯ ವಿಷಯ ಮುಸ್ಲಿಂ ಸಮುದಾಯದ ಸಾಮಾನ್ಯ ವ್ಯಕ್ತಿಗೂ ತಿಳಿಯುವಂತಾಗಲಿ. ವಕ್ಫ್ ತಿದ್ದುಪಡಿ ದೇಶದ ಪ್ರತಿಯೊಬ್ಬರಿಗೂ ಅರ್ಥವಾದಲ್ಲಿ ಮಾತ್ರ ಕಾಯಿದೆ ಜಾರಿ ಪರ – ವಿರೋಧ ಚರ್ಚೆ ಜನರಿಗೆ ಅರ್ಥವಾಗಿ, ನಿರ್ಧಾರ ಕೈಗೊಳ್ಳಲು ಸಾಧ್ಯವಾಗುತ್ತದೆ.

### ವಿಶ್ವ ರಂಗಭೂಮಿ ದಿನಾಚರಣೆ, ಚಿನ್ಮಯ ಕಲಾಶ್ರೀ, ರಂಗಗೌರವ ಪ್ರಶಸ್ತಿ ಪ್ರದಾನ

# ಯುವಕರು ರಂಗ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ಗದಗ**

'ನಾಟಕ' ಸಾಹಿತ್ಯದ ಮಹತ್ವದ ಪ್ರಕಾರವಾಗಿದ್ದು, ಅಭಿನಯದ ಮೂಲಕ ಪ್ರೇಕ್ಷಕರಲ್ಲಿ ಒಳನೋಟವನ್ನು ಮೂಡಿಸುತ್ತದೆ. ಇತ್ತೀಚಿನ ದಿನಗಳಲ್ಲಿ ರಂಗಭೂಮಿಯ ಪ್ರಾಮುಖ್ಯತೆ ಕ್ಷೀಣಿಸುತ್ತಿದ್ದು, ಯುವಜನರು ಈ ಚಟುವಟಿಕೆಗಳಲ್ಲಿ ತೊಡುಗುವಂತೆ ಮಾಡುವ ಅನಿವಾರ್ಯ ಉಂಟಾಗಿದೆ ಎಂದು ಪ್ರೊ. ಅನ್ನದಾನಿ ಹಿರೇಮಠ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಇವರ ಸಹಯೋಗದಲ್ಲಿ ಗದುಗಿನ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ವಿಶ್ವರಂಗಭೂಮಿ ದಿನಾಚರಣೆ ಅಂಗವಾಗಿ ಜರುಗಿದ ಉಪನ್ಯಾಸ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಆಧುನಿಕ ರಂಗಭೂಮಿ ಕುರಿತು ಉಪನ್ಯಾಸ ನೀಡಿದ ರಂಗ ನಿರ್ದೇಶಕ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ, ರಂಗಭೂಮಿಯಲ್ಲಿ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಸಿಕೊಂಡು ಪ್ರೇಕ್ಷಕರನ್ನು ಸೆಳೆಯುವ ಕಾರ್ಯವನ್ನು ಮಾಡಬೇಕಾಗಿದೆ. ಯುವಜನಾಂಗಕ್ಕೆ ಶಿಬಿರಗಳನ್ನು ಸಂಘಟಿಸಿ ಆಸಕ್ತಿ ಬೆಳೆಸಬೇಕೆಂದು ತಿಳಿಸಿದರು.

ಚಿನ್ಮಯ ಕಲಾಶ್ರೀ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಹಿರಿಯ ರಂಗಭೂಮಿ ಕಲಾವಿದ ವಿಜಯಕುಮಾರ ಜಿತೂರಿ, ಇಂದಿನ ಯುವಪೀಳಿಗೆ ರಂಗಭೂಮಿಯ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.



ರಂಗಗೌರವ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಹಿರಿಯ ರಂಗ ಕಲಾವಿದೆ ಕವಿತಾ ಕಾಶಪ್ಪನವರ, ಬದುಕಿನ ಮೌಲ್ಯಗಳನ್ನು ತಿಳಿಸಲು ನಾಟಕಗಳು ಪರಿಣಾಮಕಾರಿ ಮಾಧ್ಯಮವಾಗಿದೆ. ಕುಟುಂಬ ಮತ್ತು ಸಮಾಜದಲ್ಲಿ ಪ್ರೋತ್ಸಾಹ ದೊರೆತಾಗ ಮಾತ್ರ ಮಹಿಳೆಯರು ಅಭಿನಯ ಕಲೆಯಲ್ಲಿ ತೊಡಗಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಅಧ್ಯಕ್ಷ ಮೌನೇಶ ಬಡಿಗೇರ ಮಾತನಾಡಿ, ರಂಗಕಲೆಯಲ್ಲಿ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕಳೆದ ದಶಕದಿಂದ ಕಲಾವಿದರಿಗೆ ಪ್ರಶಸ್ತಿ-ಪುರಸ್ಕಾರಗಳನ್ನು ನೀಡುತ್ತಾ ಬಂದಿದ್ದೇವೆ. ಗದುಗಿನ ರಂಗ ಪರಿಸರವನ್ನು ಇನ್ನಷ್ಟು ಸುಂದರಗೊಳಿಸುವ ಹಿನ್ನೆಲೆಯಲ್ಲಿ ಅನೇಕ ಕಾರ್ಯಕ್ರಮಗಳನ್ನು ಅಕಾಡೆಮಿ ಹಮ್ಮಿಕೊಳ್ಳಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ಡಾ. ರಾಜಶೇಖರ ದಾನರಡ್ಡಿ, ಬಸವರಾಜ ನೆಲಜೇರಿ, ತುಕಾರಾಮ ಪಾಂಡ್ರೆ, ರಾಜಶೇಖರ ಪಾಟೀಲ, ಮುರಳಿಧರ ಸಂಕನೂರ, ಶ್ಯಾಮಸುಂದರ ಕುಲಕರ್ಣಿ, ಬಸವರಾಜ ವಾರಿ, ಡಾ. ಬಿ.ಬಿ. ಹೊಳಗುಂದಿ, ಶಶಿಧರ ರೇಷ್ಮೆ, ಅನಂತಮೋಹನ ಭಟ್, ಮಾಲತೇಶಗೌಡ ಪಾಟೀಲ, ಕಾಶೀನಾಥಸಾ ಜಿತೂರಿ, ರಂಗಪ್ಪ ಹುಯಿಲಗೋಳ, ಶಿವು ಭಜಂತ್ರಿ, ಬಾಹುಬಲಿ ಜೈನರ್, ಅಶೋಕ ಗಿರಡ್ಡಿ, ಮಲ್ಲಪ್ಪಡೋಣಿ, ಯಲ್ಲಪ್ಪ ಹಂದ್ರಾಳ, ಶಕುಂತಲಾ ಸಿಂಧೂರ, ರೂಪಾಜಿತೂರಿ, ರಾಜೇಶ್ವರಿ ಬಡ್ನಿ, ಸಿ.ಎಂ. ಮಾರನಬಸರಿ, ಅನಸೂಯಾ ಮಿಟ್ಟಿ, ಶುಭಾಂಗಿ ದ್ಯಾಮೇನಹಳ್ಳಿ, ಷಡಕ್ಷರಿ ಮೆಣಸಿನಕಾಯಿ, ಶೈಲಶ್ರೀ ಕಪ್ಪರದ, ಎಚ್.ಟಿ. ಸಂಜೀವಸ್ವಾಮಿ, ಬಿ.ಎಸ್. ಹಿಂಡಿ, ಅಮರೇಶರಾಂಪೂರ, ಕೆ.ಜಿ. ವ್ಯಾಪಾರಿ, ಪ್ರ.ತೋ. ನಾರಾಯಣಪೂರ, ದಿಲೀಪಕುಮಾರ ಮುಗಳಿ, ಶಶಿಕಾಂತ ಕೊರ್ಲಹಳ್ಳಿ, ಜಿ.ಎ. ಪಾಟೀಲ, ಶರಣಪ್ಪ ಹೊಸಂಗಡಿ, ಶಾರದಾಕಾತರಕಿ, ಸುಧಾ ಬಳ್ಳಿ, ಪ್ರಶಾಂತ ಪಾಟೀಲ, ಅಮೃತಾ ಚನ್ನಪಗೌಡರ, ಸತೀಶ ಚನ್ನಪ್ಪಗೌಡರ, ಅಮರೇಶ ರಾಂಪೂರ, ಚನವೀರಪ್ಪ ದುಂದೂರ, ಎಸ್.ಸಿ. ಹಾಲಕೇರಿ, ರತ್ನಾ ಪುರಂತರ, ಆರ್.ಡಿ. ಕಪ್ಪಲಿ ಮೊದಲಾದವರು ಉಪಸ್ಥಿತರಿದ್ದರು.

ಡಿ.ಎಸ್. ಬಾಪುರಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಸತೀಶ ಚನ್ನಪ್ಪಗೌಡ್ರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ವೃತ್ತಿ ಹಾಗೂ ಹವ್ಯಾಸಿ ರಂಗಭೂಮಿಯ ತವರೂರು ಗದುಗಿನ ಪರಿಸರವಾಗಿದೆ. ರಂಗ ಚಟುವಟಿಕೆಗಳು ನಿರಂತರವಾಗಿ ಜರುಗುವ ಹಿನ್ನೆಲೆಯಲ್ಲಿ ಇಲ್ಲಿಯ ಎಲ್ಲ ಕಲಾ ಸಂಘಟನೆಗಳು ಒಗ್ಗೂಡಿ ಕಾರ್ಯ ಮಾಡಬೇಕು. ಮಕ್ಕಳಿಗೆ ರಂಗಕಲೆಯನ್ನು ಕಲಿಸಿಕೊಡುವ ಮೂಲಕ ಹೊಸ ತಲೆಮಾರಿನ ಸೃಷ್ಟಿಯಾಗಬೇಕೆಂದು ತಿಳಿಸಿದರು.

# ಹಾವೇರಿಯಲ್ಲಿ ವಂದೇ ಭಾರತ್ ನಿಲುಗಡೆ: ಆನಂದ್ ಸ್ವಾಮಿ ಸ್ವಾಗತ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಾವೇರಿಯಲ್ಲಿ ವಂದೇ ಭಾರತ್ ರೈಲು ನಿಲುಗಡೆಗೊಳಿಸುವಂತೆ ಆದೇಶಿಸಿರುವ ಕೇಂದ್ರ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಕಾಂಗ್ರೆಸ್ ಮುಖಂಡ ಆನಂದಸ್ವಾಮಿ ಗಡ್ಡದೇವರಮಠ ಅಭಿನಂದಿಸಿದ್ದಾರೆ.

ಬುಧವಾರ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಧಾರವಾಡ-ಬೆಂಗಳೂರು ಮಧ್ಯೆ ಸಂಚರಿಸುವ ವಂದೇ ಭಾರತ್ ರೈಲನ್ನು ಧಾರವಾಡ, ಹುಬ್ಬಳ್ಳಿ, ದಾವಣಗೆರೆ ಮತ್ತು ತುಮಕೂರು ನಿಲ್ದಾಣಗಳಲ್ಲಷ್ಟೇ ನಿಲುಗಡೆ ಮಾಡಲಾಗುತ್ತಿತ್ತು. ಹಾವೇರಿ ಮತ್ತು ಗದಗ ಜಿಲ್ಲೆಯ



ಜನರಿಗೂ ಸಹ ಈ ರೈಲಿನ ಉಪಯೋಗವಾಗಬೇಕು ಎನ್ನುವ ನಿಟ್ಟಿನಲ್ಲಿ ಹಾವೇರಿ ನಿಲ್ದಾಣದಲ್ಲಿ ಸಹ ನಿಲುಗಡೆಗೆ ಕ್ರಮ ಕೈಗೊಳ್ಳುವಂತೆ ಇತ್ತೀಚಿಗೆ ಹುಬ್ಬಳ್ಳಿ ನಗರಕ್ಕೆ ಆಗಮಿಸಿದ್ದ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ಭೇಟಿ ಮಾಡಿ ಶಾಸಕರಾದ ಶ್ರೀನಿವಾಸ ಮಾನೆ ಅವರ ನೇತೃತ್ವದಲ್ಲಿ ಮನವಿ ಮಾಡಿಕೊಳ್ಳಲಾಗಿತ್ತು. ಇದಕ್ಕೆ ಸ್ಪಂದಿಸಿದ್ದಕ್ಕೆ ಗಡ್ಡದೇವರಮಠ ಸಂತಸ ವ್ಯಕ್ತಪಡಿಸಿದ್ದಾರೆ.

ಈ ನಿಟ್ಟಿನಲ್ಲಿ ಪ್ರಯತ್ನಿಸಿ ವಂದೇ ಭಾರತ್ ರೈಲನ್ನು ಹಾವೇರಿ ನಿಲ್ದಾಣದಲ್ಲಿ ಈ ಭಾಗದ ಪ್ರಯಾಣಿಕರಿಗೆ ಅನುಕೂಲವಾಗಲು ಕನಿಷ್ಠ 5 ನಿಮಿಷಗಳಾದರೂ ನಿಲುಗಡೆ ಮಾಡಿಸುವಂತೆ ಮನವಿ ಮಾಡಿಕೊಂಡಿದ್ದನ್ನು ನೆನಪಿಸಿಕೊಂಡಿರುವ ಆನಂದ ಗಡ್ಡದೇವರಮಠ, ತಮ್ಮ ಮನವಿಗೆ ಸ್ಪಂದಿಸಿದ್ದಕ್ಕೆ ಸಂಸದ ಬೊಮ್ಮಾಯಿ ಅವರಿಗೂ ಸಹ ಅಭಿನಂದನೆ ಸಲ್ಲಿಸಿದ್ದಾರೆ.


### ಸೈಬರ್ ವಂಚನೆಯ ಸಂಭವನೀಯತೆಯ ಕುರಿತು ಎಚ್ಚರಿಕೆ ನೀಡಿದ ಜಿಲ್ಲಾ ಪೊಲೀಸ್

# ಫೋಟೋಗಳನ್ನು ಹಂಚಿಕೊಳ್ಳುವ ಮೊದಲು ಎಚ್ಚರವಾಗಿರಿ

■ **ವಿಜಯಸಾಕ್ಷಿಸುದ್ದಿ,ಲಕ್ಷ್ಮೇಶ್ವರ**

ಸದ್ಯಕ್ಕೆಎಲ್ಲೆಲ್ಲೂಘಿಬ್ಲಿಯದ್ದೇ ಹವಾ. ಇದೀಗ ಬಹುತೇಕರು ತಮ್ಮಘಿಬ್ಲಿಸ್ಟೈಲ್ ಫೋಟೋ ಸೃಷ್ಟಿಸಿ ವಾಟ್ಸಾಪ್ ಸ್ಟೇಟಸ್, ಫೇಸ್‌ಬುಕ್‌ನಲ್ಲಿ ಅಪ್ಲೋಡ್ ಮಾಡುತ್ತಿರುವುದುಟ್ರೆಂಡ್‌ಆಗಿದೆ. ಘಿಬ್ಲಿಪೋಟೋಸೋಷಿಯಲ್ ಮೀಡಿಯಾದಲ್ಲಿ ಬಿರುಗಾಳಿ ಎಬ್ಬಿಸುತ್ತಿರುವ ಜಪಾನಿನ ಅನಿಮೇಷನ್‌ಕಲೆಯಾಗಿದ್ದು, ಎಲ್ಲೆಡೆ ಹವಾ ಸೃಷ್ಟಿಸುತ್ತಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿ,ಕ್ರಿಕೆಟಿಗಸಚಿನ್‌ರಂತಹ ದಿಗ್ಗಜರ ಘಿಬ್ಲಿ ಪೋಟೊಗಳು ಸಾಮಾಜಿಕ ಜಾಲತಣದಲ್ಲಿ ಹರಿದಾಡುತ್ತಿರುವುದರ ಬೆನ್ನಲ್ಲೇ ಮಕ್ಕಳಿಂದ ಹಿಡಿದು ಹಿರಿಯರವರೆಗೂಈಅನಿಮೇಷನ್ ಮೋಹಕ್ಕೊಳಗಾಗಿದ್ದಾರೆ.ಎಐ ತಂತ್ರಜ್ಞಾನಕ್ಕೆಮನಸೋತಿರುವ ನೆಟ್ಟಿಗರು ತಮ್ಮ ವಿವಿಧ



ಪೋಟೋಗಳನ್ನು ಘಿಬ್ಲಿಗೆ ಪರಿವರ್ತಿಸಿಹರಿಬಿಡುತ್ತಿದ್ದಾರೆ. ಜಪಾನ್(ಟೋಕೊಯೋ)ದಲ್ಲಿ ಕಳೆದ 30 ವರ್ಷಗಳಿಂದ ಚಾಲ್ತಿಯಲ್ಲಿರುವ ಈ ಸ್ಟೈಲ್ ಈಗ ದೇಶದಲ್ಲಿ ಏಕಾಏಕಿ ಬಳಕೆಯಾಗುತ್ತಿರುವುದು ಸೋಜಿಗವಾಗಿದೆ.ಮೊಬೈಲ್‌ನಲ್ಲಿ ಚಾಟ್ ಜಿಪಿಟಿ ವೆಬ್‌ಸೈಟ್‌ನ ಮೂಲಕತಮ್ಮಇಷ್ಟದಪೋಟೋ ಅಪ್‌ಲೋಡ್ ಮಾಡಿ ಘಿಬ್ಲಿ ಸ್ಟೈಲ್ ಫೋಟೋ ಪಡೆದು ಸೋಷಿಯಲ್‌ಮೀಡಿಯಾದಲ್ಲಿ ಅಪ್ಲೋಡ್‌ಮಾಡಲಾಗುತ್ತಿದೆ.

ಈ ಕುರಿತು ಗದಗ ಜಿಲ್ಲಾ ಪೊಲೀಸ್‌ಸಾಮಾಜಿಕಜಾಲತಾಣದ ಮೂಲಕ ಘಿಬ್ಲಿ ಬಳಕೆಯ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯ ಮಾಡುತ್ತಿದೆ. ಬಳಕೆಯಿಂದಾಗಬಹುದಾದ ಅಪಾಯಗಳಬಗ್ಗೆತಿಳಿಸುತ್ತಿರುವ ಪೊಲೀಸ್ ಉಘಟು ಒಡಿಣ: ಉಚಿಣಉಕಖಿ, ಘಿಬ್ಲಿ ಜನರೇಟರ್‌ನಲ್ಲಿ ನಿಮ್ಮ ಫೋಟೋಗಳನ್ನುಅಪ್‌ಲೋಡ್ ಮಾಡುವುದುಎಷ್ಟುಸುರಕ್ಷಿತ, ಅಪಾಯಗಳೇನು ಎಂಬ ಬಗ್ಗೆ ಮಾಹಿತಿ ನೀಡಿದೆ.

ಬಳಕೆದಾರರಫೋಟೋಗಳನ್ನು ಅವರ ಅನುಮತಿಯಿಲ್ಲದೆ ವಿವಿಧ ಉದ್ದೇಶಗಳಿಗಾಗಿ ಬಳಸಬಹುದು,ಫೋಟೋಗಳನ್ನು ದುರುಪಯೋಗಪಡಿಸಿಕೊಳ್ಳುವ ಮೂಲಕಯಾರೊಬ್ಬರಗುರುತನ್ನು ಕದಿಯಬಹುದು,ಬಳಕೆದಾರರ ಮಾಹಿತಿಯುಸುರಕ್ಷಿತವಾಗಿರದೇ ಇರಬಹುದುಮತ್ತುಹ್ಯಾಕಿಂಗ್‌ಗೆ ಬಲಿಯಾಗಬಹುದುಫೋಟೋಗಳನ್ನು ತಪ್ಪಾಗಿ ಬಳಸಬಹುದು, ನಕಲಿ ಪ್ರೊಫೈಲ್‌ಗಳನ್ನುರಚಿಸಬಹುದು, ಬಳಕೆದಾರರ ಫೋಟೋಗಳ ಅನಧಿಕೃತಬಳಕೆಯುಕಾನೂನು ಸಮಸ್ಯೆಗಳನ್ನುಉಂಟುಮಾಡಬಹುದು. ಈಅಪಾಯಗಳನ್ನುಪರಿಗಣಿಸಿ, ಬಳಕೆದಾರರುತಮ್ಮಫೋಟೋಗಳನ್ನು ಹಂಚಿಕೊಳ್ಳುವ ಮೊದಲು ಎಚ್ಚರಿಕೆ ವಹಿಸಬೇಕು ಎಂಬ ಎಚ್ಚರಿಕೆಯನ್ನು ನೀಡಿದೆ.

ಇದು ವೈಯಕ್ತಿಕ ಫೋಟೋಗಳನ್ನು, ಮಾಹಿತಿಗಳನ್ನು ಸಂಗ್ರಹಿಸಲು ಮಾಡುತ್ತಿರುವ ಒಂದು ತಂತ್ರವಾಗಿದ್ದು ಆ ಮೂಲಕ ಸೈಬರ್ ವಂಚನೆಯಂತಹ ಪ್ರಕರಣಗಳೂ ನಡೆಯಬಹುದಾಗಿದೆ ಎಂಬ ಎಚ್ಚರಿಕೆ, ಕಳವಳ ವ್ಯಕ್ತವಾಗುತ್ತಿದೆ. ಸಾಮಾಜಿಕ ಮಾಧ್ಯಮದಲ್ಲಿ ಹಲವು ಸಾಧಕ-ಬಾಧಕಗಳಿವೆ. ನೀವು ಅದನ್ನು ಹೇಗೆ ನಿರ್ವಹಿಸಬೇಕು ಮತ್ತು ನಕಾರಾತ್ಮಕ ಪರಿಣಾಮಗಳಿಗೆ ನೀವು ಹೇಗೆ ಸಿದ್ಧರಾಗಿರಬೇಕು ಎಂಬುದು ಮುಖ್ಯವಾಗಿದೆ.

# ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್-3 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 22 – ದೊಡ್ಡ ಮಸೂತಿ ಭಾಗ, 2000 ಮನೆ, 1400 ಮನೆ 2500 ಮನೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ರಾಜೀವ ಗಾಂಧಿನಗರ, ಪರಸು ಅವರ ಲೈನ್, ಬನ್ನಿಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 4 – ಹುಯಿಲಗೋಳ ರಸ್ತೆ ಬಲಭಾಗ, ಕಣವಿ ಪ್ಲಾಟ್, ಮಂಜುನಾಥ್ ನಗರ, ಬಿ ಎಸ್ ಎನ್ ಎಲ್ ಆಫೀಸ್, ಪಾಂಡ್ರೆಯವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 26 – ಅಕ್ಕನ ಬಳಗ, ಕಲಾಮಂದಿರ, ಜೆ ಟಿ ಮಠದ ರಸ್ತೆ, ಬಂಗಾರ ಶೆಟ್ಟರ್ ಲೈನ್, ಅಂಗಡಿಯವರ ಲೈನ್, ಗೌಳಿಯವರ ಲೈನ್, ಕೃಷ್ಣ ಟಾಕೀಸ್, ತ್ರಿಮೂರ್ತಿ ಲಾಡ್ಜ್ ಸಂಧಿ, ಮಾಳೆಕೊಪ್ಪ ಮಠದ ಸಂಧಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16 – ಹೊಂಬಳ ನಾಕಾ, ಜನತಾ ಕಾಲೋನಿ, ಮಣ್ಣಮ್ಮನವರ ಲೈನ್, ಶೌಚಾಲಯದ ಹಿಂದಿನ ಭಾಗ, ಕಟಗಿ ಅಡ್ಡೆ, ಮುಂಡರಗಿಯವರ ಲೈನ್, ಮಸೂತಿ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 14, 13 – ಟ್ಯಾಗೋರ ರಸ್ತೆ, ಮಣಿಕಂಠರವರ ಲೈನ್, ನಿಡುಗುಂದಿಯವರ ಲೈನ್, ಕಟ್ಟಿಮನಿಯವರ ಲೈನ್, ಕುರಡಗಿಯವರ ಲೈನ್, ಹಾದಿಮನಿಯವರ ಲೈನ್, ಮಟ್ಟಿ ವಕೀಲರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 23 – ಎಲಿಗಾರ ಪ್ಲಾಟ್, ಕರಿಬಿಷ್ಟಿಯವರ ಲೈನ್, ತುಪ್ಪದವರ ಲೈನ್, ಲಕ್ಷ್ಮೇಶ್ವರದವರ ಲೈನ್, ರಾಚೋಟೇಶ್ವರ ಗುಡಿ ಮುಂದಿನ ಭಾಗ, ಶರಣಪ್ಪರವರ ಲೈನ್, ಪಾಟೀಲರ ಲೈನ್, ನಾಗಪ್ಪನ ಕಟ್ಟಿ, ಮಸೂತಿ ಲೈನ್ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರ.

# ತೆನೆಯ ರಾಶಿಗೆ ಬೆಂಕಿ: ಹಾನಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪೇಠಬಣ ವ್ಯಾಪ್ತಿಯ ದುಂಡಿ ಬಸವೇಶ್ವರ ರಸ್ತೆಗೆ ಹೊಂದಿಕೊಂಡಿರುವ ಜಮೀನಿನಲ್ಲಿ ಒಕ್ಕಲಿಗಾಗಿ ಸಂಗ್ರಹಿಸಿಟ್ಟಿದ್ದ ಮೆಕ್ಕೆ ಜೋಳದ ತೆನೆಯ ರಾಶಿಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ತಗುಲಿದ ಬೆಂಕಿಗೆ 50 ಕ್ವಿಂಟಲ್‌ಗಿಂತ ಹೆಚ್ಚು ಫಸಲು ಸುಟ್ಟು ಕರಕಲಾಗಿದೆ.

ಶರಣಪ್ಪ ಪರಮೇಶ್ವರಪ್ಪ ಬಟಗುರ್ಕಿ ಹಾಗೂ ಸೋಮಶೇಖರ ವೀರಭದ್ರಪ್ಪ ಜವಳಿ ಇವರಿಗೆ ಸಂಬಂಧಿಸಿದ ನೀರಾವರಿ ಜಮೀನಿನಲ್ಲಿ ಬೆಳೆದ ಬೆಳೆ ಬೆಂಕಿಗಾಹುತಿಯಾಗಿದೆ. ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವ ಮೂಲಕ ಹೆಚ್ಚಿನ ಹಾನಿ ತಪ್ಪಿಸಿದ್ದಾರೆ. ಗ್ರಾಮ ಅಧಿಕಾರಿ ಡಿ.ಎಸ್. ಕುಲಕರ್ಣಿ ಹಾನಿ ಪರಿಶೀಲಿಸಿ ಮಾಹಿತಿ ಪಡೆದಿದ್ದಾರೆ.

### ಅಗಡಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ ಡಾ. ಪರಶುರಾಮ ಬಾರಕಿ

# ಮನುಷ್ಯ ಜನ್ಮ ಅತ್ಯಂತ ಶ್ರೇಷ್ಠ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಪಘಾತ, ಅನಾರೋಗ್ಯ, ಹೆರಿಗೆ, ಜೀವನ್ಮರಣದ ಹೋರಾಟದ ತುರ್ತು ಸಂದರ್ಭದಲ್ಲಿ ಜೀವದ ಉಳಿವಿಗಾಗಿ ರಕ್ತದಾನ ಅತ್ಯಂತ ಶ್ರೇಷ್ಠವಾಗಿದೆ ಎಂದು ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಹೇಳಿದರು.

ಅವರು ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸಂಸ್ಥಾಪಕರಾದ ದಿ. ವೆಂಕಪ್ಪ ಅಗಡಿ ಅವರ 93ನೇ ಜನ್ಮ ದಿನದ ಅಂಗವಾಗಿ ಬುಧವಾರ ಕಾಲೇಜಿನಲ್ಲಿ ಕೆ.ಎಚ್ ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಅಂಬಿಕಾ ಬ್ಲಡ್ ಬ್ಯಾಂಕ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ ಮಾತನಾಡಿದರು.




ಮನುಷ್ಯ ಜನ್ಮ ಅತ್ಯಂತ ಶ್ರೇಷ್ಠವಾಗಿದ್ದು, ಜೀವಿತಾವಧಿಯಲ್ಲಿ ಸಮಾಜಕ್ಕೆ ತನ್ನ ಕೈಲಾದಷ್ಟು ಸಹಾಯ ಮಾಡುವ ಮನೋಭಾವ ಹೊಂದಬೇಕು. ದಿ. ವೆಂಕಪ್ಪ ಅಗಡಿ ಅವರು ನಿಸ್ವಾರ್ಥದಿಂದ ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಸಾಮಾಜಿಕ ಸೇವೆ ಮಾಡಿ ಜನಮಾನಸದಲ್ಲಿ ಉಳಿದಿದ್ದಾರೆ. ಸ್ಮರಣಾರ್ಥ ಕಾಲೇಜಿನ ವಿದ್ಯಾರ್ಥಿಗಳು ಪ್ರತಿವರ್ಷ ರಕ್ತದಾನ ಶಿಬಿರ ಮಾಡುವ ಕಾರ್ಯ ಶ್ಲಾಘನೀಯ ಎಂದರು.

ಡಾ. ಸುಜಾತಾ ಸಂಗೂರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ರಕ್ತದಾನದ ಅವಶ್ಯಕತೆ ಸಾಕಷ್ಟಿದ್ದು, ಆರೋಗ್ಯವಂತ, ಸದೃಢ ಯುವಕರು ರಕ್ತದಾನ ಮಾಡುವ ಮೂಲಕ ಜೀವದಾನ ಮಾಡುವ ಪರಮಶ್ರೇಷ್ಠ ಕಾರ್ಯಕ್ಕೆ ಮುಂದಾಗಬೇಕು ಎಂದರು.

ಕಾಲೇಜಿನ ಎನ್‌ಎಸ್‌ಎಸ್, ರೆಡ್ ಕ್ರಾಸ್, ಉನ್ನತ ಭಾರತ ಅಭಿಯಾನ, ಅದ್ವಿತಾ ಲೇಡಿಸ್ ಕ್ಲಬ್‌ನ ಒಟ್ಟು 130 ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಸಿಬ್ಬಂದಿಗಳು ರಕ್ತದಾನ ಮಾಡಿದರು. ಪ.ಪೂ ಕಾಲೇಜಿನ ಪ್ರಾಚಾರ್ಯ ಡಾ. ಎನ್. ಹಯವದನ, ಡಾ. ಅನಂತ ಶಿವಪುರ, ಡಾ. ಸುಸ್ಮಿತಾ ಎಸ್, ಡಾ. ಆರ್.ಎಂ. ಪಾಟೀಲ, ಡಾ. ಸುಭಾಸ್ ಮೇಟಿ, ಪ್ರೊ. ವಿಕ್ರಂ ಶಿರೋಳ, ರವಿಪ್ರಕಾಶ, ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಕಿರಣ ಕೋತಿನ, ಪ್ರೊ. ರಾಜೇಶ್ವರಿ ಗಾಮನಗಟ್ಟಿ, ರವಿ ಸದ್ಲಾಪುರ, ದಯಾನಂದ ಬಡಿಗಣ್ಣವರ, ಡಾ. ಗಿರೀಶ್ ಯತ್ತಿನಹಳ್ಳಿ, ಡಾ. ಸಂತೋಷ ಬುಜರಿ, ಡಾ. ಶ್ರೀನಿವಾಸ, ಪ್ರೊ. ಷಣ್ಮುಖ ಜಿ, ರಮೇಶರೆಡ್ಡಿ ಮೇಲಗಿರಿ, ಸೋಮು ನವಲಗುಂದ, ಈರಣ್ಣ ಮಕರಬ್ಬಿ ಸೇರಿ ಹಲವರಿದ್ದರು.

## ಆನ್‌ಲೈನ್ ಮೂಲಕ ನಾಮನಿರ್ದೇಶನ ಸಲ್ಲಿಸಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಸುತ್ತೋಲೆಯಂತೆ 2024 ಮತ್ತು 2025ನೇ ಸಾಲಿನ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ/ ನೌಕರರು ತಮ್ಮ ನಾಮ ನಿರ್ದೇಶನಗಳನ್ನು ಕಡ್ಡಾಯವಾಗಿ ಆನ್ ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸೇವಾ ಪ್ರಶಸ್ತಿಯ ಎರಡು ಹಂತದ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸಲು ಬಯಸುವವರು ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ತಮ್ಮ ನಾಮ ನಿರ್ದೇಶನವನ್ನು ಸಲ್ಲಿಸಬೇಕು. ಈ ಪ್ರಶಸ್ತಿಗಾಗಿ ನಾಮ ನಿರ್ದೇಶನವನ್ನು ಸಲ್ಲಿಸ ಬಯಸುವವರು ಜಾಲತಾಣ ವಿಳಾಸ https://dparar.karnataka.gov.in ಅಥವಾ https://sarvothamaawards.karnataka.gov.in/ ಮೂಲಕ ಎಪ್ರಿಲ್ 14 ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಎ. 21 ರಂದು ತ್ರೈಮಾಸಿಕ ಕೆ.ಡಿ.ಪಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಎಪ್ರಿಲ್ 21 ರಂದು ಬೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸೋಲು-ಗೆಲುವುವನ್ನು ಸಮಾನವಾಗಿ ಸ್ವೀಕರಿದಲ್ಲಿ ಯಶಸ್ಸು ಸಾಧ್ಯ: ಅಭಿನವ ಚನ್ನಬಸವ ಶ್ರೀಗಳು

# ಜಕ್ಕಲಿಯಲ್ಲಿ ಗಮನ ಸೆಳೆದ ಕುಸ್ತಿ ಪಂದ್ಯಾವಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕುಸ್ತಿ ಕ್ರೀಡೆಯಲ್ಲಿ ಸೋಲು-ಗೆಲುವುವನ್ನು ಸಮಾನವಾಗಿ ಸ್ವೀಕರಿದಲ್ಲಿ ಯಶಸ್ಸು ಸಾಧ್ಯ ಎಂದು ಶಾಖಾ ಶಿವಯೋಗ ಮಂದಿರ ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು.

ಅವರು ಸಮೀಪದ ಜಕ್ಕಲಿ ಗ್ರಾಮದ ಶ್ರೀ ಮಾರುತೇಶ್ವರ ಹೊಂಡ ತುಳುಕಿಸುವ ಕಾರ್ಯಕ್ರಮ, ಗ್ರಾಮ ದೇವತೆಗಳ ಜಾತ್ರಾ ಮಹೋತ್ಸವ ಹಾಗೂ ಮೂಕಪ್ಪಜ್ಜ ಸಂಕನೂರ ಅವರ 17ನೇ ಪುಣ್ಯಾರಾಧನೆ ನಿಮಿತ್ತ ಶ್ರೀ ಮಾರುತೇಶ್ವರ ವ್ಯಾಯಾಮ ಶಾಲೆಯ ಸಂಘಟಕರು ಎರಡು ದಿನ ಆಯೋಜಿಸಿದ್ದ ರಾಜ್ಯಮಟ್ಟದ ಜಂಗಿ ನಿಖಾಲಿ ಪಂದ್ಯಾವಳಿಗೆ ಚಾಲನೆ ನೀಡಿ ಆಶೀರ್ವಚನ ನೀಡಿದರು.

ನಮ್ಮ ರಾಜ-ಮಹಾರಾಜರು ಕುಸ್ತಿಯನ್ನು ಏರ್ಪಡಿಸಿ ಪೈಲ್ವಾನರನ್ನು ಕರೆಸಿ ಅವರಿಗೆ ಆಶ್ರಯ ನೀಡಿ ಪ್ರೋತ್ಸಾಹಿಸುತ್ತಾ ಆಟವನ್ನು ಆಡಿಸುತ್ತಿದ್ದರು. ಅದೇ ರೀತಿ ಮಾರುತೇಶ್ವರ ವ್ಯಾಯಾಮ ಶಾಲೆಯ ಸಂಘಟಕರು ಇಂತಹ ಕ್ರೀಡೆಯನ್ನು ಇಲ್ಲಿ ಪ್ರತಿವರ್ಷ ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಕಾರ್ಯವಾಗಿದ್ದು, ಪ್ರತಿಯೊಬ್ಬರೂ ಕ್ರೀಡೆಯನ್ನು ಪ್ರೋತ್ಸಾಹಿಸಬೇಕೆಂದರು.



ಇದೇ ವೇಳೆ ಕುಸ್ತಿಪಟು ದಿ. ಮೂಕಪ್ಪಜ್ಜ ಸಂಕನೂರ ಇವರನ್ನು ಸ್ಮರಿಸಿದರು. ಬಳಿಕ ಪೂಜ್ಯಶ್ರೀಗಳನ್ನು ಸನ್ಮಾನಿಸಲಾಯಿತು. ಗ್ರಾಮದ ಖ್ಯಾತ ಹಿರಿಯ ಪೈಲ್ವಾನ್ ದಿ. ಮೂಕಪ್ಪಜ್ಜ ಸಂಕನೂರ ಅವರ ಭಾವಚಿತ್ರಕ್ಕೆ ಹೂಮಾಲೆ ಹಾಕಿ ಮೌನಾಚರಣೆ ಮಾಡಿದ್ದು ವಿಶೇಷವಾಗಿತ್ತು.

ವಿಶೇಷ ಕುಸ್ತಿಯಲ್ಲಿ ಕಮತಗಿಯ ಹುಸೇನ ಪೈಲ್ವಾನ ಅವರನ್ನು ಚಿತ್ ಮಾಡುವ ಮೂಲಕ ಗಮನ ಸೆಳೆದ ಬೆಳಗಾವಿಯ ಹನಮಂತ ಪೈಲ್ವಾನ 3 ಕೆಜಿ ಬೆಳ್ಳಿಗದೆ, ನಗದು ಹಣ ಪಡೆದು ವಿಜಯಶಾಲಿಯಾದರು. ಬೆಳಗಾವ್, ಡಾವಣಗೇರಿ, ಗದಗ, ಧಾರವಾಡ, ಬಾಗಲಕೋಟಿ, ತಡಸಿನಕೊಪ್ಪ, ಲಕ್ಕುಂಡಿ, ಕರಡಿಕೊಪ್ಪ, ಹುಯಿಲಗೋಳ, ಕಡಪಟ್ಟಿ, ರೋಣ, ಅಬ್ಬಿಗೇರಿ ಸೇರಿದಂತೆ ರಾಜ್ಯದ ವಿವಿಧ ಗ್ರಾಮೀಣ ಭಾಗಗಳಿಂದ ಆಗಮಿಸಿದ್ದ 100ಕ್ಕೂ ಹೆಚ್ಚು ಜಗಜಟ್ಟಿಗಳು ಅಖಾಡದಲ್ಲಿ ತಮ್ಮ ಶಕ್ತಿಪ್ರದರ್ಶನ ಮಾಡಿದ್ದು, ಮೈನವಿರೇಳಿಸಿದ ಪೈಲ್ವಾನರ ಕಾಳಗಕ್ಕೆ ನೂರಾರು ಸಂಖ್ಯೆಯ ಕ್ರೀಡಾ ಪ್ರೇಮಿಗಳು ಸಾಕ್ಷಿಯಾದರು.

ಗ್ರಾಮದ ಪೈಲ್ವಾನ್ ಬಸವರಾಜ ಹಡಪದ ಪಾರಿತೋಷಕ, ನಗದು ಬಹುಮಾನ ಪಡೆದರು.

ಮುಖ್ಯ ಅತಿಥಿಯಾಗಿ ಶಿವನಾಗಪ್ಪ ದೊಡ್ಡಮೇಟಿ, ಅಶೋಕಪ್ಪ ಕಡಗದ, ಕಿರಣ ಮುಗಳಿ, ಎಮ್.ಎಸ್. ಕೋರಿ, ಶೇಖರಪ್ಪ ಆದಿ, ಬಸವರಾಜ ಶ್ಯಾಶೆಟ್ಟಿ, ಅಂದಪ್ಪ ಸಂಕನೂರ, ಮುತ್ತಣ್ಣ ಅಕ್ಕಿಶೆಟ್ಟರ, ಬಸವರಾಜ ಆದಿ, ಶಿವರಾಜ ಮುಗಳಿ, ಬಸಪ್ಪ ಕೊಪ್ಪದ ಸೇರಿದಂತೆ ಇನ್ನಿತರರು ಇದ್ದರು.

ಶಲವಡಿಯ ದೇವಪ್ಪ, ಕನ್ನಾಳದ ದೇವಪ್ಪ, ಹೇಮಣ್ಣ, ಕುರ್ತುಕೋಟಿಯ ನಿವೃತ್ತ ಎಎಸ್ಐ ರಾಮಣ್ಣ ಹಲಗಿ, ಅಬ್ಬಿಗೇರಿಯ ರಾಯಪ್ಪ, ಗಾಂಧೆಪ್ಪ ಕುರಿ, ಧರ್ಮಣ್ಣ ಆರೇರ್, ಯಲ್ಲಪ್ಪ ಮಡಿವಾಳರ ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿದರು.

ಲಕ್ಷ್ಮೇಶ್ವರದ ದೇವಪ್ಪ ಗಡೇದ, ಹೊಂಬಳದ ಹುಸೇನಸಾಬ, ಪ್ರಕಾಶಪ್ಪ ಹೊಸಮನಿ ವೀಕ್ಷಕ ವಿವರಣೆ ನೀಡಿದರು.

ಗೆದ್ದ ಕುಸ್ತಿಪಟುಗಳನ್ನು ಪ್ರೇಕ್ಷಕರು ಭುಜದ ಮೇಲೆ ಹೊತ್ತು ಸಂಭ್ರಮಿಸಿದರು. ಪ್ರಥಮ ಸ್ಥಾನದ ಬೆಳಗಾವಿಯ ಪವನ್ ಅವರೊಂದಿಗೆ ತೀವ್ರ ಸೆಣಸಾಟ ನಡೆಸಿದ ಪೈಲ್ವಾನ ತಡಸಿನಕೊಪ್ಪದ ನಾಗರಾಜ ಅವರು ಎದುರಾಳಿಯನ್ನು ಚಾಕಚಕ್ಯತೆಯಿಂದ ಕೆಡವಿ 5 ಸಾವಿರ ನಗದು ಬಹುಮಾನ ತಮ್ಮದಾಗಿಸಿಕೊಂಡರು. ದ್ವಿತೀಯ ಮತ್ತು ತೃತೀಯ ಸ್ಥಾನದ ಕ್ರೀಡಾಪಟುಗಳಾದ ತಡಸಿನಕೊಪ್ಪದ ಶಶಾಂಕ ಜೊತೆ ಪುಡಕಲಕಟ್ಟಿಯ ಸಿದ್ದಾರೂಢ, ಕರಡಿಕೊಪ್ಪದ ಪ್ರಥಮ್ ಜೊತೆ ಬಡಕುದರಿಯ ಪ್ರವೀಣ ಸಮಜೋಡಿ ಆಟ ಪ್ರದರ್ಶಿಸಿ ನಗದು ಬಹುಮಾನ ಪಡೆದರು.

# ಹೊಂಡ ತಳುಕಿಸಿ ಸಂಭ್ರಮಿಸಿದ ಭಕ್ತರು



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದ ಮಾರುತೇಶ್ವರ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಮಾರುತಿ ದೇವರ ಬಣ್ಣದ ಹೊಂಡವನ್ನು ಮಂಗಳವಾರ ನೂರಾರು ಭಕ್ತರು ತಳುಕಿಸಿ ಸಂಭ್ರಮಿಸಿದರು.

ಇದಕ್ಕೂ ಪೂರ್ವದಲ್ಲಿ ಕುಂಬಾರ ಮನೆಗೆ ತೆರಳಿ ಕುಂಭ ತಂದು ಗಂಗಾ ಪೂಜೆ ನೆರವೇರಿಸಿದರು. ಹೊಂಡದ ಸುತ್ತ ಸುರಗಿ ಸುತ್ತಿದ ನಂತರ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಲಾಯಿತು. ಈ ವರ್ಷ ಹೊಂಡದ ಕಾಯಿಯನ್ನು ಗೋವಿಂದ ಶಂಕ್ರಪ್ಪ ಪೂಜಾರ ಹರಿದರು. ಹೊಂಡ ತಳುಕಿಸಿದ ನಂತರ ರಥವನ್ನು ಎಳೆಯುವ ಕಾರ್ಯಕ್ರಮದಲ್ಲಿ ಅರ್ಚಕರಾದ ವೆಂಕಟೇಶ ಪೂಜಾರ, ಶೇಖಪ್ಪ ಪೂಜಾರ, ಶಂಕ್ರಪ್ಪ ಪೂಜಾರ, ಹನುಮಪ್ಪ ಪೂಜಾರ, ಶ್ರೀಕಾಂತ ಪೂಜಾರ, ಸುರೇಶ ಪೂಜಾರ ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡಿದ್ದರು.




ಲಕ್ಷ್ಮೇಶ್ವರ ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಜನೋಪಯೋಗಿ ಮತ್ತು ಜಾನುವಾರುಗಳ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ನಿರ್ಮಿಸಿದ ನೀರಿನ ತೊಟ್ಟಿಗಳ ನಿರ್ವಹಣೆಯಿಲ್ಲದೇ ಅವು ಕಸದ ತೊಟ್ಟಿಗಳಾಗಿ ಮಾರ್ಪಟ್ಟಿದ್ದವು. ಗೊಜನೂರ ಗ್ರಾಮದಲ್ಲಿ ನಿರ್ಲಕ್ಷ್ಯಕ್ಕೊಳಗಾದ ನೀರಿನ ತೊಟ್ಟಿಯ ಅವಶ್ಯಕತೆಯನ್ನರಿತ ಗ್ರಾಮದ ಕೆಲ ಯುವಕರು ಸ್ವಯಂ ಪ್ರೇರಿತರಾಗಿ ಸ್ವಚ್ಛಗೊಳಿಸಿ, ಸುಣ್ಣ-ಬಣ್ಣ ಬಳಿದು ಮಾದರಿಯಾದರು.

# ಶ್ರೀ ದೇವರ ದಾಸಿಮಯ್ಯ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಅದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಬುಧವಾರ ಶ್ರೀ ಬನಶಂಕರಿ ದೇವಸ್ಥಾನದಲ್ಲಿ ಹಾಗೂ ಶಿಗ್ಲಿ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡ ಆದೇಶ ಹುಲಗೂರ, ಕನ್ನಡ ಸಾಹಿತ್ಯ ಕ್ಷೇತ್ರ ಮತ್ತು ಸಾಮಾಜಿಕ ಪ್ರಗತಿಯಲ್ಲಿ ದಾಸಿಮಯ್ಯನವರ ಕೊಡುಗೆ ಅಪಾರವಾಗಿದೆ. ದಾಸಿಮಯ್ಯನವರನ್ನು ಕೇವಲ ಒಂದು ಜಾತಿ, ಜನಾಂಗಕ್ಕೆ ಸೀಮಿತಗೊಳಿಸದೇ ಅವರ ವಚನಗಳಲ್ಲಿನ ಸಾರವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.




ಈ ಸಂದರ್ಭದಲ್ಲಿ ಹಿರಿಯರಾದ ವಿಷ್ಣುಪ್ಪ ಪುಟ್ಟಪ್ಪನವರ, ಬಾಲಚಂದ್ರ ಜನಿವಾರದ, ಬಸಪ್ಪ ಮೂಲಿಮನಿ, ಶಿವಾನಂದ ಮುದಗಲ್ಲ, ಚಂದ್ರು ಮೂಲಿಮನಿ, ಕೃಷ್ಣ ಬಿದರಹಳ್ಳಿ, ಶಂಕಪ್ಪ ಕಳ್ಳಿ, ಆದೇಶ ಹುಲಗೂರ, ವೀರಪ್ಪಣ್ಣ ಮೂಲಿಮನಿ, ಪ್ರಕಾಶ ಬೆಟಗೇರಿ, ಪ್ರವೀಣ ಹುಲಗೂರ, ಅಂಬರೀಶ ಹುಲಗೂರ, ಪರಮೇಶ್ವರ ಕರ್ಜಗಿ, ರಾಘವೇಂದ್ರ ಅಸುಂಡಿ, ಆನಂದ ಮುಗದಲ್ಲ, ಗ್ರಾ.ಪಂ ಸದಸ್ಯರಾದ ಸಂತೋಷ ತಾಂದಳೆ, ಸಿದ್ದರಾಮಸ್ವಾಮಿ ಪೂಜಾರ ಸೇರಿದಂತೆ ದೇವಾಂಗ ಸಮಾಜದ ಹಿರಿಯರು ಉಪಸ್ಥಿತರಿದ್ದರು.

# ಗುಟ್ಕಾ ಖರೀದಿ ವಿಚಾರಕ್ಕೆ ಯುವಕನ ಕೊಲೆ!

■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಗುಟ್ಕಾ ಖರೀದಿ ವಿಚಾರಕ್ಕೆ ಯುವಕನ ಕೊಲೆ ನಡೆದಿರುವ ಘಟನೆ ಹೊಸದುರ್ಗ ತಾಲ್ಲೂಕಿನ ಮತ್ತೋಡು ಗ್ರಾಮದಲ್ಲಿ ನಡೆದಿದೆ. ಸೋಮಶೇಖರ್ (25) ಮೃತಪಟ್ಟ ವ್ಯಕ್ತಿಯಾಗಿದ್ದು, ಮೃತ ಸೋಮಶೇಖರ್ ನ ತಮ್ಮ ನಾಗರಾಜ್ ಗುಟ್ಕಾ ತರಲು ಹೋದಾಗ, ನಾಗರಾಜ್ ಗೆ ಅಂಗಡಿ ಮಾಲೀಕ ಫೋನ್ ಪೇ ಇಲ್ಲ ಹಣ ಕೊಡುವಂತೆ ಹೇಳಿದ್ದಾರೆ. ಈ ವೇಳೆ ಫೋನ್ ಪೇನಲ್ಲಿ ಹಣ ಇಲ್ಲ ಎಂದಾಗ ಮಾತಿನ ಚಕಮಕಿ ನಡೆದು ಅಂಗಡಿಯಲ್ಲಿದ್ದ ರಘು ಎಂಬಾತ ನಾಗರಾಜ್ ಮೇಲೆ ಹಲ್ಲೆ ಮಾಡಲಾಗಿದೆ. ಜಗಳ ಬಿಡಿಸಲು ನಾಗರಾಜ್ ನ ಅಣ್ಣ ಸೋಮಶೇಖರ್ ಬಂದಿದ್ದಾರೆ. ಈ ವೇಳೆ ರಘು, ಮಂಜುನಾಥ್, ಗವಿ ರಂಗನಾಥ್ ಹಾಗೂ ಶಶಿಕುಮಾರ್ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ. ಇದರಿಂದಾಗಿ ಗಂಭೀರವಾಗಿ ಗಾಯಗೊಂಡ ಸೋಮಶೇಖರ್‌ನನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಿಸದೆ ಸೋಮಶೇಖರ್ ಸಾವನ್ನಪ್ಪಿದ್ದಾನೆ. ಶ್ರೀರಾಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಬೆಲೆ ಏರಿಕೆಗೆ ಕೇಂದ್ರ ಸರ್ಕಾರದ ನೀತಿಗಳೇ ಪ್ರಮುಖ ಕಾರಣ: ಮಾಜಿ ಸಚಿವ ದೇಶಪಾಂಡೆ ಆರೋಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಲೆ ಏರಿಕೆಗೆ ಕೇಂದ್ರ ಸರ್ಕಾರದ ನೀತಿಗಳೇ ಪ್ರಮುಖ ಕಾರಣ ಎಂದು ಕಾಂಗ್ರೆಸ್ ಹಿರಿಯ ನಾಯಕ, ಮಾಜಿ ಸಚಿವ ದೇಶಪಾಂಡೆ ಆರೋಪಿಸಿದ್ದಾರೆ. ಬೆಲೆ ಏರಿಕೆ ಖಂಡಿಸಿ ಬಿಜೆಪಿಯಿಂದ ಅಹೋರಾತ್ರಿ ಧರಣಿ ಮಾಡುತ್ತಿರುವ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಬೆಲೆ ಏರಿಕೆ ವಿರೋಧಿಸಿ ಬಿಜೆಪಿ ಅಹೋರಾತ್ರಿ ಧರಣಿ ಮಾಡುವುದು ಅವರ ಇಷ್ಟ. ಆದರೆ, ಅದರಲ್ಲಿ ಯಶಸ್ಸು ಆಗುವುದಿಲ್ಲ.

# ಬೇಸಿಗೆ ಶಿಬಿರದ ಪ್ರಯೋಜನ ಪಡೆದುಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳು ಬೇಸಿಗೆ ಶಿಬಿರದ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದು ಐಕಾನ್ ಸಂಸ್ಥೆಯ ನಾಗರಾಜ ಬಂಡಿ ಹೇಳಿದರು.

ಪಟ್ಟಣದ ಕೆ.ಎಸ್.ಎಸ್ ಮಾಹಾವಿದ್ಯಾಲಯದಲ್ಲಿ ಐಕಾನ್ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿ, ಇಂದು ಆಧುನಿಕ ತಂತ್ರಜ್ಞಾನ ಬೆಳೆದಂತೆ ಮಕ್ಕಳಲ್ಲಿ ಓದುವ ಕುತೂಹಲ ಹೆಚ್ಚುತ್ತಿದ್ದು, ಅವರ ಭವಿಷ್ಯಕ್ಕೆ ಪಾಲಕರು ಸಹಾಯ ಸಹಕಾರ ನೀಡಿದಲ್ಲಿ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಲು ಸಹಕಾರಿಯಾಗುತ್ತದೆ ಎಂದರು.

ಉಮಾ ಬ್ಯಾಳಿ ಮಾತನಾಡಿ, ಮಕ್ಕಳು ಬೇಸಿಗೆ ರಜೆಯಲ್ಲಿ ಕಾಲಹರಣ ಮಾಡಬಾರದೆಂದು ಐಕಾನ್ ಬೇಸಿಗೆ ಶಿಬಿರ ಏರ್ಪಡಿಸಿದ್ದು, ಶಿಬಿರದ ಪ್ರಯೋಜನವನ್ನು ಪ್ರತಿಯೊಬ್ಬ ಮಕ್ಕಳೂ ಪಡೆದುಕೊಳ್ಳಬೇಕು. 1ನೇ ತರಗತಿಯಿಂದ 10ನೇ ತರಗತಿವರೆಗೂ ಪ್ರವೇಶಕ್ಕೆ ಅವಕಾಶವಿದ್ದು, ಈಗಾಗಲೇ ತರಗತಿಗಳು ಪ್ರಾರಂಭವಾಗಿರುತ್ತವೆ ಎಂದರು.

ಜ್ಯೋತಿ ನೀಲಗುಂದ, ದಾವಲಸಾಬ ಲಾಡಸಾಬನವರ, ಹಬೀಬಾ ಗುಬ್ಬಿ, ಪೂಜಾ ಮ್ಯಾಗೇರಿ, ರೇಷ್ಮಾ ಪರ್ವತಗೌಡರ, ಶಿವಲೀಲಾ ಕೋರಿ, ನಿಷತಾ ಲಾಡಸಾಬನವರ, ಶಿವಲಿಂಗಪ್ಪ ಕೊಂಡಿಕೊಪ್ಪ, ಲಕ್ಷ್ಮೀ ಇದ್ದರು.

# ಗದಗ-ಬೆಟಗೇರಿ ನಗರಸಭೆಯ 'ಆಯವ್ಯಯ ವಿಶೇಷ ಸಭೆ'

▶▶ಮೊದಲನೇ ಪುಟದಿಂದ

**ಆರೋಗ್ಯ ಮತ್ತು ನೈರ್ಮಲ್ಯ:** ಪಟ್ಟಣದ ನೈರ್ಮಲ್ಯ ಹಾಗೂ ಆರೋಗ್ಯ ಕಾಯ್ದುಕೊಂಡು, ಶುದ್ಧ ಕುಡಿಯುವ ನೀರು ಒದಗಿಸಿ ನಗರವಾಸಿಗಳ ಆರೋಗ್ಯ ಸ್ಥಿತಿ ಸುಧಾರಿಸುವ ಕಾರ್ಯಕ್ರಮಕ್ಕಾಗಿ ಈ ಪ್ರಸಕ್ತ ವರ್ಷ ರೂ. 1522.17 ಲಕ್ಷಗಳನ್ನು ಈ ಮುಂಗಡ ಪತ್ರದಲ್ಲಿ ವೆಚ್ಚಕ್ಕಾಗಿ ಪ್ರಸ್ತಾವನೆ ಮಾಡಿಕೊಳ್ಳಲಾಗಿದೆ.

15 ನೇ ಹಣಕಾಸಿನಡಿ ಹೆಚ್ಚುವರಿಯಾಗಿ (ನಾನ್ ಮಿಲಿಯನಿಯಮ್ ಪ್ಲಸ್ ಸಿಟೀಸ್ ) **Non Millionium Plus Cities** ಅನುದಾನದಡಿ ರೂ. 308.00 ಲಕ್ಷಗಳು ಬಿಡುಗಡೆ-ಯಾಗಿದ್ದು, ಅದನ್ನು ಪೂರ್ಣವಾಗಿ ಸರ್ಕಾರದ ಸುತ್ತೋಲೆಯಂತೆ ನೀರು ಸರಬರಾಜು ಹಾಗೂ ಘನತ್ಯಾಜ್ಯ ವಸ್ತು ನಿರ್ವಹಣೆಗಾಗಿ ಬಳಸಿಕೊಳ್ಳಲು ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ. ಹೊರಗುತ್ತಿಗೆ ಪೌರಕಾರ್ಮಿಕರು/ಲೋಡರ್ಸಗಳು ಹಾಗೂ ಮನೆ ಮನೆ ಕಸ ಸಂಗ್ರಹಿಸುವ ಕಾರ್ಮಿಕ ಸಿಬ್ಬಂದಿಗಳ ಸಂಭಾವನೆಗಾಗಿ ಪ್ರಸಕ್ತ ವರ್ಷ ರೂ. 560.00 ಲಕ್ಷಗಳನ್ನು ಮೀಸಲಿಡಲಾಗಿದೆ. ಹಾಗೂ ಅವರ ಆರೋಗ್ಯ ಸಂರಕ್ಷಣಾ ಸಾಮಾನುಗಳನ್ನು ಖರೀದಿಸಲು ರೂ. 25.00 ಲಕ್ಷಗಳನ್ನು ಮೀಸಲಿಡಲಾಗಿದೆ. ಈ ವರ್ಷ ಘನತ್ಯಾಜ್ಯ ನಿರ್ವಹಣೆಗೆ ರೂ. 1412.28 ಲಕ್ಷಗಳನ್ನು ಮೀಸಲಿಡಲಾಗಿದೆ. ಹಾಗೂ ಬಂಡವಾಳ ಹೂಡಿ ಹೊಸ ತಂತ್ರಜ್ಞಾನದ ಮಶೀನರಿಗಳನ್ನು ಹಾಗೂ ವಿವಿಧ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ರೂ. 252.44 ಲಕ್ಷಗಳನ್ನು ಘನತಾಜ್ಯ ನಿರ್ವಹಣೆ ಕಾರ್ಯಕ್ರಮಕ್ಕಾಗಿ ಮೀಸಲಿಡಲಾಗಿದೆ.

ಇದರೊಂದಿಗೆ ಉದ್ಯಾನವನ ನಿರ್ವಹಣೆ, ಗಿಡ ನೆಡುವ ಕಾರ್ಯಕ್ರಮ, ರುದ್ರಭೂಮಿಗಳಲ್ಲಿ ಆದ್ಯತೆ ಮೇರೆಗೆ ಪರಿಸರ ಸ್ನೇಹಿ ವಿದ್ಯುತ್/ಚಿತಾಗಾರಗಳನ್ನು ಅಳವಡಿಸಲು, ಸ್ಮಶಾನ ಮತ್ತು ಶವ ಸಂಸ್ಕಾರ ಸ್ಥಳಗಳ ನಿರ್ವಹಣೆ, ಈಜುಗೊಳ ನಿರ್ವಹಣೆ, ಇನ್ನಿತರ ಸಾರ್ವಜನಿಕ ನಾಗರಿಕ ಸೌಲಭ್ಯಗಳನ್ನು ಒದಗಿಸಲು, ಇಂದಿರಾ ಕ್ಯಾಂಟಿನ್ ಹಾಗೂ ಇನ್ನಿತರ ಸಾರ್ವಜನಿಕ ಸೌಲಭ್ಯಕ್ಕಾಗಿ ಅನುದಾನ ಮೀಸಲಿರಿಸಿದೆ.

ಈ ಸಂದರ್ಭದಲ್ಲಿ ನಗರಸಭೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ (ಪರಿಸರ) ಆನಂದ ಬದಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ (ಸಿವಿಲ್) ಬಂಡಿವಡ್ಡರ, ಲೆಕ್ಕಾಧೀಕ್ಷಕರಾದ ಟಿ.ಎಚ್. ದ್ಯಾವನೂರ ಹಾಗೂ ನಗರಸಭೆ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

### ದುಷ್ಟ ನಿಗ್ರಹ, ಶಿಷ್ಟ ಪರಿಪಾಲಕ ಶಿಂಗಟಾಲೂರ ಶ್ರೀ ವೀರಭದ್ರ ದೇವರು

# ಶ್ರೀ ವೀರಭದ್ರ ದೇವರ ರಥೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿವನ ಉರಿನೇತ್ರದಿಂದ ಉದ್ಭವಿಸಿ, ನವಬ್ರಹ್ಮರಲ್ಲಿಯೇ ಮೇಲಾದ ದಕ್ಷಬ್ರಹ್ಮನ ಶಿರವ ಹರಿದು, ವೀರ ಹನುಮಂತನಿಗೆ ಇಷ್ಟಲಿಂಗ ಧಾರಣೆ ಮಾಡಿ, ಆದಿ ಜಗದ್ಗುರು ರೇಣುಕಾಚಾರ್ಯರ ಪೀಠದ ಅಗೋತ್ರ ಪುರುಷನಾಗಿ, ಹಿರಣ್ಯರಾಕ್ಷಸನನ್ನು ಸಂಹಾರ ಮಾಡಿ, ಶಿವನ ನೆಚ್ಚಿನ ಮಗನಾಗಿ, ಧರ್ಮಜಾಗೃತಗೊಳಿಸಿ, ಭೂಲೋಕದಲ್ಲಿ ಶಿವಭಕ್ತಿ ಆಂದೋಲನ ಮಾಡಿ ಜಗದೊಡೆಯನಾಗಿ ಕಾಮಿತಾರ್ಥವನ್ನು ಬೇಡಿದವರಿಗೆ ನೀಡುತ್ತಾ, ಮೃಡನ ಭಕ್ತರನ್ನು ಸಲುಹುತ್ತಾ ಕಪ್ಪತ್ತಗುಡ್ಡದ ತುದಿಯಂಚಿನಲ್ಲಿ ತುಂಗಭದ್ರಾ ನದಿಯ ದಂಡೆಯ ಮೇಲೆ ವಿರಾಜಮಾನನಾಗಿ ಶಿಂಗಟಾಲೂರ ಕ್ಷೇತ್ರದಲ್ಲಿ ನೆಲೆಸಿ ಭಕ್ತರ ಸಂಕಟಗಳನ್ನು ದೂರ ಮಾಡುತ್ತಾ ವಿಜೃಂಭಿಸುತ್ತಿರುವನು ಶ್ರೀ ವೀರಭದ್ರ. ಸದ್ಯ ಶಿಂಗಟಾಲೂರಿನಲ್ಲಿ ನಿತ್ಯವೂ ಪೂಜೆಗೊಳ್ಳುತ್ತಿರುವ ಈ ಸ್ಥಳವು ಈಗ ಶಿಂಗಟಾಲೂರ ಕ್ಷೇತ್ರವಾಗಿ ನಾಡಿನ ಉದ್ದಗಲಕ್ಕೂ ಅಪಾರ ಭಕ್ತ ಸಮೂಹವನ್ನು ಹೊಂದಿ ಪ್ರತಿನಿತ್ಯವೂ ರುದ್ರಾಭಿಷೇಕ, ಶ್ರಾವಣ ಮಾಸಗಳಲ್ಲಿ, ಕಾರ್ತಿಕ ಮಾಸಗಳಲ್ಲಿ ವಿಶೇಷ ಉತ್ಸವಗಳು, ಅಗ್ನಿಮಹೋತ್ಸವಗಳು, ಧರ್ಮ ಸಮ್ಮೇಳನಗಳು ನಡೆಯುತ್ತಾ ಬಂದಿವೆ. ಹತ್ತು ಹಲವು ಪವಾಡಗಳು ನಿತ್ಯವೂ ಶ್ರೀ ಕ್ಷೇತ್ರದಲ್ಲಿ ನಡೆಯುವ ಮೂಲಕ ಜಾಗೃತ ಸ್ಥಳವಾಗಿ ಹೊರಹೊಮ್ಮಿದೆ. ಪರಶಿವನನ್ನು ಕೊಂದು ಶಿವಲೋಕವನ್ನಾಳುವದಕ್ಕಾಗಿ ಭೂಲೋಕದಲ್ಲಿ ದಕ್ಷಬ್ರಹ್ಮನು ಹಮ್ಮಿಕೊಂಡಿದ್ದ ಬೃಹತ್ ಯಜ್ಞಮಂಟಪವನ್ನು ಶ್ರೀ ವೀರಭದ್ರ ದೇವರು ಧ್ವಂಸಗೊಳಿಸಿದ್ದರ ದ್ಯೋತಕವಾಗಿ ವೀರಭದ್ರ ದೇವರ ಜಾತ್ರಾಮಹೋತ್ಸವದಲ್ಲಿ ಅಗ್ನಿಮಹೋತ್ಸವಕ್ಕೆ ವಿಶೇಷ ಸ್ಥಾನವಿದೆ. ಅಂತೆಯೇ ಶಿಂಗಟಾಲೂರಿನಲ್ಲಿ ನಡೆಯುವ ಅಗ್ನಿಮಹೋತ್ಸವದಲ್ಲಿ ಅಪಾರ ಸಂಖ್ಯೆಯಲ್ಲಿ ಶ್ರೀ ವೀರಭದ್ರನ ಅನುಯಾಯಿಗಳಾದ ವೀರಪುರವಂತರು ವೀರಭದ್ರದೇವರ ವಚನಗಳನ್ನು ಹೇಳುತ್ತಾ, ವೀರ ಸಮ್ಮಾಳಗಳ ಝೇಂಕಾರದೊಂದಿಗೆ, ನಂದಿಧ್ವಜಗಳ ಭವ್ಯ ಕುಣಿತದೊಂದಿಗೆ, ವಿಶೇಷ ಅಲಂಕೃತ ಪಲ್ಲಕ್ಕಿಯಲ್ಲಿ ಶ್ರೀ ವೀರಭದ್ರ ದೇವರ ಉತ್ಸವ ಮೂರ್ತಿಯ ಭವ್ಯ ಮೆರವಣಿಗೆ ನಡೆಸಿ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಗಲ್ಲಗಳಿಗೆ, ತುಟಿಗಳಿಗೆ, ನಾಲಿಗೆ, ಗಂಟಲು ಹಾಗೂ ಹೊಟ್ಟೆಯಲ್ಲಿ ಶಸ್ತ್ರಗಳನ್ನು ಧರಿಸಿ ಬೃಹತ್ ಅಗ್ನಿಕುಂಡದಲ್ಲಿ ಹಾಯುವುದರ ಮೂಲಕ ವೀರಭದ್ರದೇವರ ಕೃಪೆಗೆ ಪಾತ್ರರಾಗುತ್ತಿದ್ದಾರೆ.



ಎ.3ರಂದು ಸಂಜೆ 5 ಗಂಟೆಗೆ ಶ್ರೀ ವೀರಭದ್ರೇಶ್ವರ ದೇವರ ಮಹಾರಥೋತ್ಸವ, ರಾತ್ರಿ 7 ಗಂಟೆಗೆ ಧರ್ಮಸಭೆ, ಎ.4ರ ಬೆಳಿಗ್ಗೆ 8 ಗಂಟೆಗೆ ಅಗ್ನಿಮಹೋತ್ಸವ, ಎ.5ರಂದು ಸಂಜೆ 6 ಗಂಟೆಗೆ ಓಕುಳಿ ಕಾರ್ಯಕ್ರಮಗಳು ನಡೆಯಲಿವೆ.

ಈ ಕುರಿತು ಪ್ರತಿಕ್ರಿಯಿಸಿದ ಶ್ರೀ ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಕರಬಸಪ್ಪ ಹಂಚಿನಾಳ, ಭಕ್ತರ ಸಹಕಾರದಿಂದ ದೇವಸ್ಥಾನವನ್ನು ಬೃಹತ್ ಶಿಲೆಗಳಿಂದ ಭವ್ಯ ದೇಗುಲ ನಿರ್ಮಾಣ ಮಾಡಿದೆ. ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗೆ ನೆರೆಯ ಜಿಲ್ಲೆಗಳಿಂದ ಬಸ್ ಸೇವೆಯಿದೆ. ಜೊತೆಗೆ ಶುದ್ಧ ಕುಡಿಯುವ ನೀರು, ವಸತಿ ಮತ್ತು ಸಮರ್ಪಕ ಸಂಚಾರಿ ವ್ಯವಸ್ಥೆಯನ್ನು ಮಾಡಲಾಗಿದೆ. ವಿಶೇಷವಾಗಿ ನದಿಗೆ ಹೆಚ್ಚಿನ ನೀರು ಬಿಡಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗ್ರಮಿಸಿ ಜಾತ್ರೆಯ ಎಲ್ಲ ಕಾರ್ಯಗಳಲ್ಲಿ ಭಾಗಿಯಾಗಿ ಶ್ರೀ ವೀರಭದ್ರೇಶ್ವರ ದೇವರ ಕೃಪೆಗೆ ಪಾತ್ರರಾಗಬೇಕೆಂದು ಹೇಳಿದರು.

# ಅಲ್ಪಸಂಖ್ಯಾತರ ಆರ್ಥಿಕ ವ್ಯವಸ್ಥೆಯ ಮೇಲಿನ ದಾಳಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಕ್ಫ್ ಕಾಯ್ದೆ ತಿದ್ದುಪಡಿ ಮಾಡುತ್ತಿರುವುದು ಧಾರ್ಮಿಕ ಸ್ವಾತಂತ್ರ್ಯ ಹಾಗೂ ಒಕ್ಕೂಟ ವ್ಯವಸ್ಥೆಯ ಮೇಲಿನ ದಾಳಿಯಾಗಿದ್ದು, ಸಂವಿಧಾನ ವಿರೋಧಿ ನಡೆಯಾಗಿದೆ ಎಂದು ಅಂಜುಮನ್ ಇಸ್ಲಾಂ ಕಮಿಟಿಯ ಮಾಜಿ ಕಾರ್ಯದರ್ಶಿ, ಹಾಲಿ ನಿರ್ದೇಶಕ ದಾವಲಸಾಬ ತಾಳಿಕೋಟಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ವಕ್ಫ್ ಕಾಯ್ದೆ ತಿದ್ದುಪಡಿಯ ನೆಪದಲ್ಲಿ ವಕ್ಫ್ ಮಂಡಳಿಗೆ ಸೇರಿದ ಎಲ್ಲ ಜಮೀನುಗಳನ್ನು ಕೇಂದ್ರ ಸರ್ಕಾರವು ಮಾರಲು ಹುನ್ನಾರ ನಡೆಸಿದಂತಿದೆ. ಆ ಮೂಲಕ ಅಲ್ಪಸಂಖ್ಯಾತರ ಆರ್ಥಿಕ ವ್ಯವಸ್ಥೆ ಮೇಲೆ ದಾಳಿ ಮಾಡಲು ಮುಂದಾಗಿದೆ.

ಅಲ್ಪಸಂಖ್ಯಾತರ ಹಕ್ಕುಗಳನ್ನು ಹತ್ತಿಕ್ಕುವ ಎಲ್ಲ ಪ್ರಯತ್ನವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಹಂತ ಹಂತವಾಗಿ ಮಾಡುತ್ತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಈ ಕಾಯ್ದೆ ತಿದ್ದುಪಡಿ ವಿರೋಧಿಸಿ ದೇಶದ ಮೂಲೆ ಮೂಲೆಗಳಲ್ಲಿ ಕೋಟ್ಯಾಂತರ ಮುಸ್ಲಿಮರು ವಕ್ಫ್ ತಿದ್ದುಪಡಿ ವಿಧೇಯಕ ವಿರೋಧಿಸಿ, ಇಮೇಲ್, ಪತ್ರದ ಮೂಲಕ, ಸರ್ಕಾರಗಳಿಗೆ ಮನವಿ, ಸಲ್ಲಿಸುವ ಮೂಲಕ ಪ್ರತಿಭಟನೆ ನಡೆಸುತ್ತಿರುವಾಗ ಅವರ ಅಹವಾಲು ಆಲಿಸದೆ ವಿಧೇಯಕವನ್ನು ಲೋಕಸಭೆಯಲ್ಲಿ ಮಂಡಿಸಿರುವುದು ಪ್ರಜಾಪ್ರಭುತ್ವಕ್ಕೆ ಎಸಗಿದ ದ್ರೋಹವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

### 'ಪೊಲೀಸ್ ಧ್ವಜ ದಿನಾಚರಣೆ' ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ

# ಗದಗ ಜಿಲ್ಲಾ ಪೊಲೀಸ್ ಸಮರ್ಥವಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಪೊಲೀಸ್ ಅಂದರೆ ಶಿಸ್ತಿನ ಇಲಾಖೆ. ನಮಗೆ ಸಿಕ್ಕಿರುವ ಅವಕಾಶವನ್ನು ಪ್ರಾಮಾಣಿಕತೆಯಿಂದ ನಿರ್ವಹಿಸಿದರೆ ಜನಸಾಮಾನ್ಯರಿಗೆ ನ್ಯಾಯ ದೊರಕಿಸಿಕೊಡಬಹುದು. ಗದಗ ಜಿಲ್ಲಾ ಪೊಲೀಸ್ ಅಂದರೆ ಹೆಮ್ಮೆಯ ಪೊಲೀಸ್ ಎಂದಾಗಬೇಕು. ಆ ರೀತಿಯಲ್ಲಿ ನಮ್ಮ ಕಾರ್ಯನಿರ್ವಹಣೆ ಇರಬೇಕು ಎಂದು ನಿವೃತ್ತ ಪಿಎಸ್‌ಐ ಎಚ್.ಎಚ್. ನೀಲಗುಂದ ಹೇಳಿದರು.

ಮಲ್ಲಸಮುದ್ರದ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನದಲ್ಲಿ ಬುಧವಾರ ನಡೆದ ಪೊಲೀಸ್ ಧ್ವಜ ದಿನಾಚರಣೆ, ನಿವೃತ್ತ ಪೊಲೀಸರ ಸೇವಾ ಸ್ಮರಣೆ ಹಾಗೂ ಗೌರವ ಸಮರ್ಪಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸರು ತಮ್ಮ ಪ್ರಾಣವನ್ನೂ ಲೆಕ್ಕಿಸದೇ ಕರ್ತವ್ಯ ನಿರ್ವಹಿಸುತ್ತಾರೆ. ಅಪರಾಧ ತಡೆಗಟ್ಟಲು ಹಾಗೂ ಅಪರಾಧ ಪತ್ತೆ ಹಚ್ಚಲು ಬದ್ಧತೆಯಿಂದ ಕೆಲಸ ನಿರ್ವಹಿಸುವ ಪೊಲೀಸ್ ಸಿಬ್ಬಂದಿಗೆ ಸರ್ಕಾರ ಇನ್ನೂ ಹೆಚ್ಚಿನ ಸವಲತ್ತುಗಳನ್ನು ಒದಗಿಸಬೇಕು. ಪೊಲೀಸರ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಆಶಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಪ್ರತಿ ವರ್ಷ ಪೊಲೀಸ್ ಧ್ವಜ ದಿನಾಚರಣೆ ಸಂದರ್ಭದಲ್ಲಿ ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ ಅದರಿಂದ ಬಂದ ಶೇ. 50ರಷ್ಟು ಹಣವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮನಿಧಿಗೆ ಮತ್ತು ಶೇ. 50ರಷ್ಟು ಹಣವನ್ನು ಕೇಂದ್ರ ನಿವೃತ್ತ ಪೊಲೀಸ್ ಕಲ್ಯಾಣ ನಿಧಿಗೆ ಜಮಾ ಮಾಡಲಾಗುತ್ತದೆ. ಈ ನಿಧಿಯನ್ನು ಸೇವೆಯಲ್ಲಿರುವ ಹಾಗೂ ನಿವೃತ್ತ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯ ವೈದ್ಯಕೀಯ ವೆಚ್ಚಕ್ಕೆ ವಿನಿಯೋಗಿಸಲಾಗುತ್ತದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಶಾಶ್ವತ್ ಹೆಬಸೂರ, ಶಶಿ ಸಂಕಣ್ಣವರ, ಮೇಘರಾಜ ತೋಟಗಂಟಿ, ಡಾ. ಅರುಣಾ ಮಾಲಿ, ಅಭಿನಂದನ್ ಪಾಟೀಲ, ಅಶೋಕ ಹೊಳಕಣ್ಣವರ ಅವರಿಗೆ ಸಮುದಾಯ ರಕ್ಷರ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಉತ್ತಮ ಕಾರ್ಯನಿರ್ವಹಣೆ ತೋರಿದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಸನ್ಮಾನಿಸಲಾಯಿತು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ವೇದಿಕೆಯಲ್ಲಿದ್ದರು. ಎಂ.ಟಿ. ಭಟ್ ಕಾರ್ಯಕ್ರಮ ನಿರೂಪಿಸಿದರು. ಡಿವೈಎಸ್‌ಪಿ ಪ್ರಭುಗೌಡ ಕಿರೆದಳ್ಳಿ ವಂದಿಸಿದರು.



ಪ್ರತಿ ಮೂರು ತಿಂಗಳಿಗೊಮ್ಮೆ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮನಿಧಿ ಸಮಿತಿ ಸಭೆ ಕರೆದು, ಕುಂದು ಕೊರತೆಗಳನ್ನು ಆಲಿಸಲಾಗುವುದು. ಪ್ರಸಕ್ತ ವರ್ಷ 3.28 ಲಕ್ಷ ಹಣವನ್ನು ವೈದ್ಯಕೀಯ ಧನಸಹಾಯ ಹಾಗೂ ಮರಣ ಹೊಂದಿದ ನಿವೃತ್ತ ಪೊಲೀಸ್ ಅಧಿಕಾರಿಗಳ ಅಂತ್ಯ ಸಂಸ್ಕಾರಕ್ಕೆ 1.10 ಲಕ್ಷ ರೂ ನೀಡಲಾಗಿದೆ. ಅಪರಾಧ ಪ್ರಕರಣಗಳನ್ನು ಭೇದಿಸುವಲ್ಲಿ ಗದಗ ಜಿಲ್ಲಾ ಪೊಲೀಸ್ ಮುಂಚೂಣಿಯಲ್ಲಿದೆ. ಜಿಲ್ಲಾ ಪೊಲೀಸ್ ಸಿಬ್ಬಂದಿ ಇದೇ ರೀತಿ ಹೆಚ್ಚಿನ ಕೆಲಸ ಮಾಡಿ ಸಾರ್ವಜನಿಕರಿಂದ ಗೌರವ ಗಳಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದರು.

ಗದಗ ಜಿಲ್ಲೆಯಲ್ಲಿ ಅತಿ ಹೆಚ್ಚಿನ ಪ್ರಕರಣಗಳಿಗೆ ಶಿಕ್ಷೆ ಆಗುತ್ತಿದೆ. ಇದರಿಂದಾಗಿ, ತನಿಖೆ ನಡೆಸಿದ ಪೊಲೀಸ್ ಅಧಿಕಾರಿಗಳ ಶ್ರಮಕ್ಕೆ ಬೆಲೆ ಸಿಗುತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರಿ ಅಭಿಯೋಜಕರ ಕಾರ್ಯ ಸ್ಮರಣೀಯ. ಗಂಭೀರ ಪ್ರಕರಣಗಳಲ್ಲಿ ಮಾತ್ರ ಅಪರಾಧಿಗಳಿಗೆ ಮರಣದಂಡನೆ ಹಾಗೂ ಜೀವಾವಧಿ ಶಿಕ್ಷೆ ಆಗುತ್ತದೆ. ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ, ಮಲ್ಲಿಕಾರ್ಜುನಗೌಡ ಎಂ.ದೊಡ್ಡಗೌಡರ, ಅಂಬರೀಷ್ ಹಿರೇಮಠ ಅವರ ಪ್ರಾಮಾಣಿಕ ಸೇವೆಯಿಂದಾಗಿ ಅನೇಕ ಪ್ರಕರಣಗಳಲ್ಲಿ ಅಪರಾಧಿಗಳಿಗೆ ಇಂತಹ ಶಿಕ್ಷೆಗಳು ಪ್ರಕಟವಾಗಿದೆ. ಅದಕ್ಕಾಗಿ ಗದಗ ಜಿಲ್ಲಾ ಪೊಲೀಸ್ ಇಲಾಖೆಯಿಂದ ಈ ಮೂವರು ಸರ್ಕಾರಿ ಅಭಿಯೋಜಕರನ್ನು ಗೌರವಿಸಲಾಗುತ್ತಿದೆ.

**– ಬಿ.ಎಸ್. ನೇಮಗೌಡ.**
**ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.**

# ಮಹಾನ್ ನಾಯಕರ ಜಯಂತಿ ಅರ್ಥಪೂರ್ಣವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಪ್ರಿಲ್ 14ರಂದು ಡಾ. ಬಿ.ಆರ್. ಅಂಬೇಡ್ಕರರ 134ನೇ ಹಾಗೂ ಬಾಬು ಜಗಜೀವನ್‌ರಾಮ್‌ರ 118ನೇ ಜಯಂತಿಯನ್ನು ಸಂಪನ್ಮೂಲ ವ್ಯಕ್ತಿಗಳನ್ನೊಳಗೊಂಡ ವಿಚಾರ ಸಂಕೀರ್ಣದ ಮೂಲಕ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ತಹಸೀಲ್ದಾರ ವಾಸುದೇವಸ್ವಾಮಿ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ತಾಲೂಕಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಮಹಾನ್ ನಾಯಕರ ಜಯಂತಿಯ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.



ಸಭೆಯಲ್ಲಿ ಮಾತನಾಡಿದ ಸುರೇಶ ನಂದೆಣ್ಣವರ, ಕೋಟೆಪ್ಪ ವರದಿ, ಗಂಗಾಧರ ಮೆನಸಿನಕಾಯಿ, ಕೇವಲ ಮಹಾನ್ ನಾಯಕರ ಭಾವಚಿತ್ರದ ಪೂಜೆ, ಮೆರವಣಿಗೆ ಮಾಡುವುದಕ್ಕಿಂತ ಡಾ. ಅಂಬೇಡ್ಕರ್, ಜಗಜೀವನ್‌ರಾಮ್ ಅವರ ವಿಚಾರಧಾರೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಪ್ರಯತ್ನವನ್ನು ಮಾಡಬೇಕು. ಲಕ್ಷ್ಮೇಶ್ವರವು ಹೊಸ ತಾಲೂಕಾಗಿದೆ. ಲಕ್ಷ್ಮೇಶ್ವರ ತಾಲೂಕಿನಲ್ಲಿಯೇ ಈ ಬಾರಿ ಮಹಾನ್ ನಾಯಕರ ಜಯಂತಿ ಆಚರಿಸುವ ಬಗ್ಗೆ ಎಲ್ಲಾ ಸಮಾಜದ ಮುಖಂಡರು ತೀರ್ಮಾನ ಮಾಡಿ ನಿರ್ಣಯ ತೆಗೆದುಕೊಳ್ಳುತ್ತೇವೆ ಎಂದರು. ಮಹಾನ್ ನಾಯಕರೀರ್ವರ ಜಯಂತಿಯನ್ನು ಹೇಗೆ ಆಚರಣೆ ಮಾಡಬೇಕು ಎಂಬುದರ ಕುರಿತು ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕಿನವರು ತೀರ್ಮಾನ ಕೈಗೊಳ್ಳುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ದಲಿತ ಮುಖಂಡರ ಸಮಿತಿಯನ್ನು ರಚಿಸಿ, ಸಮಿತಿ ಕೈಗೊಳ್ಳುವ ತೀರ್ಮಾನದಂತೆ ಜಯಂತಿಯನ್ನು ಆಚರಿಸೋಣ ಎಂದು ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮತ್ತು ಸಮಾಜ ಕಲ್ಯಾಣ ಇಲಾಖೆಯ ಎಡಿ ಗೋಪಾಲ ಲಮಾಣಿ ಹೇಳಿದರು.

ಈ ವೇಳೆ ಫಕ್ಕೀರೇಶ ಮ್ಯಾಟನ್ನವರ, ಫಕ್ಕೀರೇಶ ನಂದೆಣ್ಣವರ, ರಮೇಶ ಹಂಗನಕಟ್ಟಿ, ರಮೇಶ ಅಡಗಿಮನಿ, ರಾಮು ಗಡದವರ, ಸದಾನಂದ ನಂದೆಣ್ಣವರ, ಜಗದೀಶ ಹುಲಮ್ಮನ್ನವರ, ಸಂತೋಷ ಹಾದಿಮನಿ, ಚಂದ್ರು ತಳವಾರ, ವಿನೋದ ಶಿರಹಟ್ಟಿ, ದೇವಪ್ಪ ನಂದೇಣ್ಣವರ, ಆನಂದ ತಳಗೇರಿ, ಕೆ.ಓ. ಹುಲಿಕಟ್ಟಿ, ರಾಜು ಕಮತದ, ಅನಿಲ ಮುಳಗುಂದ, ನಾಗರಾಜ ದೊಡ್ಡಮನಿ ಹಾಗೂ ತಾಲೂಕಿನ ಎಲ್ಲಾ ಇಲಾಖೆಯ ಅಧಿಕಾರಿಗಳು ಇದ್ದರು.

# ಒತ್ತಡ ನಿವಾರಣೆಗೆ ನಗು ದಿವ್ಯೌಷಧ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಗುವೆಂಬುದು ಒತ್ತಡ ನಿವಾರಣೆಗೆ ದಿವ್ಯ ಔಷಧಿಯಾಗಿದೆ ಎಂದು ರಾಮಣ್ಣಾ ಕಮಾಜಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದಲ್ಲಿ ಮುಳಗುಂದ ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ಘಟಕದಿಂದ ಹಮ್ಮಿಕೊಂಡಿದ್ದ ನಗೆಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದು ನಾವು ಸಾಕಷ್ಟು ಒತ್ತಡ ಜೀವನ ಬದುಕುತ್ತಿದ್ದು, ಒತ್ತಡ ನಿವಾರಣೆಗೆ ನಗು ತುಂಬಾ ಅವಶ್ಯಕವಾಗಿದೆ. ನಗು ಒಂದು ನೈಸರ್ಗಿಕ ಔಷಧಿಯಾಗಿದ್ದು, ಅದು ನಮ್ಮ ಮನಸ್ಥಿತಿಯನ್ನು ಸುಧಾರಿಸುತ್ತದೆ. ನಮ್ಮ ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ. ಆದುದರಿಂದ ನಗು ನಮ್ಮ ಜೀವನದಲ್ಲಿ ತುಂಬಾ ಅವಶ್ಯಕವಾಗಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಉಪಾಧ್ಯಕ್ಷ ದಿ. ವಿ.ವಿ. ವಾಲಿ ಅವರ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನಾಚರಣೆ ಸಲ್ಲಿಸಲಾಯಿತು. ಅಧ್ಯಕ್ಷತೆಯನ್ನು ಡಾ. ಎಸ್.ಸಿ. ಚವಡಿ ವಹಿಸಿದ್ದರು. ಎಂ.ಡಿ. ಬಟ್ಟೂರ, ಸಾಹಿತಿ ಬಿ.ಎಂ. ಹರಪನಹಳ್ಳಿ, ರಾಜೇಶ್ವರಿ ಬಡ್ನಿ, ಕೆ.ಎಂ. ಹೆರಕಲ್, ಪಿ.ಎಸ್. ಮರಿದೇವರಮಠ, ಶೋಭಾ ಪಾಟೀಲ್, ಉಮಾ ಬ್ಯಾಳಿ, ಗಿರೀಶ ಪಿರಂಗಿ, ದಾವುದ ಜಮಾಲ, ಪರಪ್ಪ ಕರಿಗಾರ, ನಾಗರಾಜ ದೇಶಪಾಂಡೆ, ಶಿವಾನಂದ ಆಪ್ತಗೀರಿ, ಮಾಹಾಂತೇಶ ನಪೂರಿಮಠ, ವಿ.ಡಿ. ಸಿದ್ದನಗೌಡರ ಇದ್ದರು.

# ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಗೆ ನಿಸಾರ್ ಅಹಮದ್ ಖಾಜಿ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ನೂತನ ರಾಜ್ಯಾಧ್ಯಕ್ಷರನ್ನಾಗಿ ನಿಸಾರ್ ಅಹಮದ್ ಖಾಜಿ ಅವರನ್ನು ಆಯ್ಕೆ ಮಾಡಲಾಗಿದೆ. ಬುಧವಾರ ಗದಗನ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಬಸವರಾಜಸ್ವಾಮಿ ರಡ್ಡೇರ್ ಅವರನ್ನು ರಾಜ್ಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಯಿತು. ಸಂಸ್ಥಾಪಕ ಅಧ್ಯಕ್ಷರಾದ ಎಮ್ ಐ ಮುಳಗುಂದ ಈ ನೇಮಕಾತಿ ಆದೇಶ ಪತ್ರ ನೀಡಿದರು.

ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷರಾದ ಸುರೇಶ ಮೇದಾರ, ರಾಜ್ಯ ಸಂಚಾಲಕ ರಾಜಶೇಖರ ಕಾತರಕಿ, ಅಕ್ಬರ್ ಬೇಗ್, ಆಯ್ ಎನ್ ಹುಬ್ಬಳ್ಳಿ, ಶ್ರೀಮತಿ ಸುನೀತಾ ಬಳಗೇರ, ಸುರೇಶ ಬೆಳದಡಿ, ನೂರುಲ್ಲಾ ಪಠಾಣ, ಪ್ರಕಾಶ ಮೇಟಿ, ರಾಜು ನಾಯಕ, ದೇವಪ್ಪ ಮಲಸಮುದ್ರ, ಮಂಜು ಅಕ್ಕಿ ಸೇರಿದಂತೆ ಸದಸ್ಯರು ಪಾಲ್ಗೊಂಡಿದ್ದರು.

# ಡಾ.ಅಂಬೇಡ್ಕರ್ ಜಯಂತಿ ನಿಮಿತ್ತ ಕವನ ಸಂಕಲನ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಆದೇಶದಂತೆ ಕವನ ಸಂಕಲನ ಬಿಡುಗಡೆ ಮಾಡಬೇಕಾಗಿರುವುದರಿಂದ ಆಸಕ್ತರು ಡಾ. ಬಿ. ಆರ್. ಅಂಬೇಡ್ಕರ್ ಅವರ ಕುರಿತು ಕವನಗಳನ್ನು ರಚಿಸಿ ಎಪ್ರಿಲ್ 7 ರೊಳಗಾಗಿ ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಗದಗ ರೂ. ನಂ. 107 ಇಲ್ಲಿಗೆ ಕಳುಹಿಸಿಕೊಡಲು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಾಕುವಿನಿಂದ ಇರಿದು ವ್ಯಕ್ತಿಯ ಕೊಲೆ

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಚಾಕುವಿನಿಂದ ಇರಿದು ವ್ಯಕ್ತಿಯೋರ್ವನನ್ನು ಕೊಲೆ ಮಾಡಿ ದುಷ್ಕರ್ಮಿಗಳು ಪರಾರಿಯಾಗಿರುವ ಘಟನೆ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ನಲ್ಲೂರು ಗ್ರಾಮದಲ್ಲಿ ನಡೆದಿದೆ. ಮೊಹಮ್ಮದ್ ಜಾವೀದ್ (25) ಕೊಲೆಯಾದ ದುರ್ದೈವಿಯಾಗಿದ್ದು,ಗಾರೆ ಕೆಲಸ ಮಾಡುತ್ತಾ ಜೀವನ ನಡೆಸುತ್ತಿದ್ದ ಜಾವೀದ್ ರನ್ನು ಗ್ರಾಮದ ಹೊರ ಭಾಗದಲ್ಲಿ ಕೊಲೆ ಮಾಡಿ ಆರೋಪಿಗಳು ಪರಾರಿಯಾಗಿದ್ದಾರೆ.

### ಜ್ಞಾನಾಮೃತ, ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಂಚಾಕ್ಷರ ಶ್ರೀ

# ನೈತಿಕ ಮೌಲ್ಯಗಳಿಂದ ಉನ್ನತಿ

■ವಿಜಯಸಾಕ್ಷಿ ಸುದ್ದಿ, ಗದಗ

ಧರ್ಮ ಸಂಸ್ಕಾರಯುತವಾದ ಬದುಕು ಆದರ್ಶಪ್ರಾಯವಾದದ್ದು. ನೈತಿಕ ಮೌಲ್ಯಗಳು ಮನುಷ್ಯನನ್ನು ಉನ್ನತಿಗೇರಿಸುತ್ತವೆ. ತಾಯಿಯ ಸಂಸ್ಕಾರದಿಂದ ನಮ್ಮಲ್ಲಿ ಮೌಲ್ಯಗಳು ರೂಢಿಯಾಗುತ್ತದೆ ಎಂದು ಅಡ್ನೂರ ಬೃಹನ್ಮಠದ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.




ಅವರು ಮಂಗಳವಾರ ಗದುಗಿನ ಜ. ಪಂಚಾಚಾರ್ಯ ವೇದ ಸಂಸ್ಕೃತ ಪಾಠ ಶಾಲೆಯಲ್ಲಿ ಜರುಗಿದ 184ನೇ ಮಾಸಿಕ ಶ್ರೀ ಸಿದ್ಧಾಂತ ಶಿಖಾಮಣಿ ಜ್ಞಾನಾಮೃತ ಹಾಗೂ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಮಾತನಾಡಿ, ಹಿಡಿದ ಕೆಲಸ ಸಾಧಿಸುವಲ್ಲಿ ಮಹಿಳೆಯರು ಛಲಗಾರ್ತಿಯರು. ತಮ್ಮಲ್ಲಿರುವ ಕೀಳರಿಮೆ ತೊರೆದು ಎಡರು-ತೊಡರುಗಳನ್ನು ದಾಟಿ ಯಶಸ್ಸು ಸಾಧಿಸಬೇಕು. ಮುಖ್ಯವಾಗಿ ನಾವೆಲ್ಲರೂ ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬಿತ್ತುವಲ್ಲಿ ಮುಂದಾಗಬೇಕಿದೆ ಎಂದರು.

ಸ್ತ್ರೀಯರು ಔದಾರ್ಯ ಹಾಗೂ ಸಹನೆಯ ಮೂರ್ತಿಯಾಗಿದ್ದಾರೆ. ಮುಖ್ಯವಾಗಿ ಮಕ್ಕಳು ಹಾಗೂ ಕುಟುಂಬದ ಜವಾಬ್ದಾರಿಯಲ್ಲಿ ಪ್ರಮುಖ ಪಾತ್ರಧಾರಿಯಾಗಿ ನಮ್ಮ ತಾಯಂದಿರು ಇದ್ದಾರೆ ಎಂದರು.


ಗುರುರಕ್ಷೆಯನ್ನು ಪಡೆದ ಗಾಯಕಿ ಸಂಗೀತಾ ಭರಮಗೌಡರ ಮಾತನಾಡಿ, ಸಾಧನೆ ಮಾಡಲು ಸಹಕಾರ ಬೇಕು. ನನ್ನ ಸಾಧನೆಯ ಹಿಂದೆ ಕಾಣದ ಕೈಗಳು ಸಾಕಷ್ಟು ಸಹಕಾರ ನೀಡಿದ್ದು ನನ್ನ ಸಾಧನೆಗೆ ಪ್ರೇರಣೆ ಆಯಿತು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜ್ಞಾನಾಮೃತ ಸಮಿತಿಯ ಗೌರವಾಧ್ಯಕ್ಷ ಎಲ್.ಪಿ. ಕಂಬಿ, ಜ್ಞಾನಾಮೃತ ಕಾರ್ಯಕ್ರಮವು ನಮ್ಮಲ್ಲಿ ಧಾರ್ಮಿಕ ಜಾಗೃತಿಯನ್ನುಂಟುಮಾಡುತ್ತದೆ. ಮಕ್ಕಳೊಂದಿಗೆ ಪಾಲಕರು ಇಲ್ಲಿ ಪಾಲ್ಗೊಳ್ಳುವದರಿಂದ ಉತ್ತಮ ಮೌಲ್ಯಗಳು ಮಕ್ಕಳಲ್ಲಿ ಬೆಳೆದು ಬರುತ್ತವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜ್ಞಾನಾಮೃತ ಸಮಿತಿಯ ಅಧ್ಯಕ್ಷ ಎಸ್.ಎಸ್. ಮೇಟಿ ಮಾತನಾಡಿ, ಶಿವಾನುಭವವು ನಮ್ಮಲ್ಲಿ ಅರಿವು ಆಚಾರಗಳನ್ನು ಮೂಡಿಸಿ ಬದುಕಿಗೆ ದಾರಿ ತೋರುತ್ತವೆ ಎಂದರು.

ವೇದಿಕೆಯ ಮೇಲೆ ನಾಗರತ್ನ ಹುಬ್ಬಳಿಮಠ ಹಾಗೂ ಪ್ರಸಾದ ಭಕ್ತಿ ಸೇವೆ ವಹಿಸಿದ್ದ ಶಿವಲಿಂಗಮ್ಮ ತಾವರಗೇರಿಮಠ ಉಪಸ್ಥಿತರಿದ್ದರು. ಪುಟ್ಟರಾಜ ಹಿರೇಮಠ ಹಾಗೂ ರೇವಣಯ್ಯ ಹಿರೇಮಠ ಪ್ರಾರ್ಥಿಸಿದರು. ಸಮಿತಿಯ ಕಾರ್ಯದರ್ಶಿ ಶರಣಪ್ಪ ಬಳಿಗೇರ ಸ್ವಾಗತಿಸಿದರು. ಸಂಸ್ಕೃತ ಪಾಠಶಾಲೆಯ ಮುಖ್ಯೋಪಾಧ್ಯಾಯ ಗುರುಸಿದ್ಧಯ್ಯ ಹಿರೇಮಠ ನಿರೂಪಿಸಿದರು. ವೀರಭದ್ರಯ್ಯ ಧನ್ನೂರಹಿರೇಮಠ ಪರಿಚಯಿಸಿದರು, ಶಶಿರೇಖಾ ಶಿಗ್ಲಿಮಠ ವಂದಿಸಿದರು.

ವಿವಿದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹನೀಯರನ್ನು ಸಮಿತಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕಾವ್ಯಾ ದಂಡಿನ, ವ್ಹಿ.ಎಸ್. ಶಿವಕಾಳಿಮಠ, ಅನ್ನಪೂರ್ಣ ಮಾಳೇಕೊಪ್ಪಮಠ, ಆರ್.ಎಂ. ಹಿರೇಮಠ, ನಿರ್ಮಲಾ ಹುಬಳೀಮಠ, ಭಾಗ್ಯಶ್ರೀ ಕುರಡಗಿ, ರಾಜಶೇಖರ ಕಲ್ಮಠ, ಪ್ರಭಾವತಿ ದೊಡ್ಡಮನಿ, ರುದ್ರಯ್ಯ ಹಿರೇಮಠ, ಸಂಗಯ್ಯ ಹಿರೇಮಠ, ಆಕಾಶ ಚೌಕಿಮಠ, ಶಶಿಧರ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.



ಸೇವಾ ನಿವೃತ್ತಿ ಹೊಂದಿದ ಲಕ್ಷೇಶ್ವರ ತಾಲೂಕಿನ ದೊಡ್ಡೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಎನ್.ಎಸ್. ಮಲ್ಲೇದ ಅವರನ್ನು ಸನ್ಮಾನಿಸಲಾಯಿತು. ಸಿಆರ್‌ಪಿ ಶಿವಾನಂದ ಅಸುಂಡಿ, ಉಮೇಶ ಡೊಳ್ಳಿನ, ಚಂದ್ರು ನೇಕಾರ, ವಾಸು ದೀಪಾಲಿ, ಬನ್ನೇಶ ಲಮಾಣಿ, ಪುಟ್ಟಪ್ಪ ಲಮಾಣಿ, ಶ್ರೀಶೈಲ ಬಾಬಣ್ಣವರ, ಕೆ.ಸಿ. ಪಟ್ಟೇದ, ಎಫ್.ಎನ್. ಗೋಣೆಪ್ಪನವರ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka